ಸಂಪುಟ : 10 ಸಂಚಿಕೆ: 26 ಪುಟ : 4+2 ಬೆಲೆ: 3.00 ರವಿವಾರ ಫೆಬ್ರವರಿ 23 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 26 Pages : 4+2 Price : 3.00 Sunday February 23 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಶರಣ ಸಂಗಮದಲ್ಲಿ ಉಪನ್ಯಾಸ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಫೆ. 23ರ ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1634ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ ಭಾವೈಕ್ಯತೆಯ ಹರಿಕಾರ ಡಾ. ತೆ- ಣೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 76ನೇ ಜಯಂತಿ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ ಶರಣ ಎಸ್.ಎನ್. ಹಕಾರಿ ವಹಿಸುವರು. ಶರಣ ಸಾಹಿತ್ಯ ಚಿಂತಕ ಶರಣ ಎಸ್.ಎ. ಮುಗದ ಸಹಜ ಶಿವಯೋಗ ಮಾಡುವರು. ಶರಣ ಪ್ರಶಾಂತ ಎಂ.ಲಿಂಗಧಾಳ ಉಪನ್ಯಾಸ ನೀಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗುತ್ತೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗುತ್ತದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು. ಧಾರವಾಡದಲ್ಲಿ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷರನ್ನ ನೇಮಿಸುವ ಅಧಿಕಾರ ನಮಗಿಲ್ಲ, ಅದನ್ನ ಹೈಕಮಾಂಡ್ ನೋಡುತ್ತೆ. ನೀವು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಪ್ರಬಲ ಆಕಾಂಕ್ಷಿಯಾ ಎಂಬ ಪ್ರಶ್ನೆಗೆ, ಈ ಬಗ್ಗೆ ಯಾವುದೇ ಪ್ರಸ್ತಾಪ ಆಗಿಲ್ಲ. ಚರ್ಚೆ ಆಗಿಲ್ಲ, ಸಮಯ ಬಂದಾಗ ನೋಡೋಣ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗುತ್ತೆ.

ಈ ಬಗ್ಗೆ ಎಐಸಿಸಿ ಅಧ್ಯಕ್ಷ ಖರ್ಗೆ ಅವರೇ ಹೇಳಿದ್ದಾರೆ. ದೇಶದ ನಾನಾ ರಾಜ್ಯಗಳ ಪಿಸಿಸಿ ಅಧ್ಯಕ್ಷರ ಬದಲಾವಣೆ ಆಗಿದೆ. ಈಗ ತಕ್ಷಣ ಮಾಡಲು ಆಗದೆ ಇರಬಹುದು, ಆದ್ರೆ ಆಗಿಯೇ ಆಗುತ್ತೆ. ಅವರು ಯಾವಾಗ ಮಾಡ್ತಾರೆ ಎನ್ನುವುದನ್ನು ಕಾದು ನೋಡೋಣ ಎಂದರು.

ಎರಡೂವರೆ ವರ್ಷದ ಬಳಿಕ ಸಿಎಂ ಬದಲಾವಣೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಅದು ನಮಗೆ ಗೊತ್ತಿಲ್ಲ, ಅದನ್ನು ದೆಹಲಿಯವರನ್ನೇ ಕೇಳಬೇಕು. ಸದ್ಯ ದಲಿತ ಸಿಎಂ ಪ್ರಶ್ನೆ ಇಲ್ಲ.

ಜಾರಕಿಹೊಳಿ ಸಿಎಂ ಎಂಬ ಚರ್ಚೆ ವಿಚಾರ, ಅದು ನಮ್ಮ ಅಭಿಮಾನಿಗಳು ಹೇಳುತ್ತಾರೆ. ನಮ್ಮ ಅಭಿಮಾನಿಗಳಿಗೆ ನಾನು ಸಿಎಂ ಆಗಬೇಕೆಂಬ ಆಸೆ ಇದೆ, ಎಲ್ಲರಿಗೂ ಅಭಿಮಾನಿಗಳು ಇದ್ದಾರೆ. ಅವರವರ ಅಭಿಮಾನಿಗಳು ತಮ್ಮ ನಾಯಕರೇ ಸಿಎಂ ಆಗಲಿ ಅಂತಾರೆ ಎಂದರು.

### ಅಡರಕಟ್ಟಿ ಗ್ರಾ.ಪಂ ಕಚೇರಿಯ ನೂತನ ಕಟ್ಟಡ ಉದ್ಘಾಟಿಸಿದ ರಂಭಾಪುರಿ ಶ್ರೀಗಳು

# ಜನಪ್ರತಿನಿಧಿಗಳು ಜನರ ನೋವಿಗೆ ಸ್ಪಂದಿಸಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮಗಳ ಉದ್ಧಾರವೇ ದೇಶದ ಉದ್ಧಾರವಾಗಿದ್ದು, ಗ್ರಾಮೀಣ ಮಟ್ಟದಲ್ಲಿರುವ ಗ್ರಾ.ಪಂ ಆಡಳಿತದಲ್ಲಿ ಜನರ ನೋವಿಗೆ ಸ್ಪಂದಿಸುವ ಆಡಳಿತ ನೀಡಬೇಕಾದ ಅವಶ್ಯಕತೆ ಇದೆ. ಜನರನ್ನು ಎಡತಾಕಿಸುವ ಪ್ರವೃತ್ತಿಯನ್ನು ಅಧಿಕಾರಿಗಳು ಕೈಬಿಡಬೇಕು. ಅಂದಾಗ ಆಡಳಿತ ಯಂತ್ರ ಚುರುಕಾಗಲು ಸಾಧ್ಯವಾಗುತ್ತದೆ ಎಂದು ರಂಭಾಪುರಿ ವೀರಸಿಂಹಾಸನಾಧೀಶ್ವರ ಜ.ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದಂಗಳವರು ನುಡಿದರು.

ಅವರು ಶನಿವಾರ ತಾಲೂಕಿನ ಅಡರಕಟ್ಟಿ ಗ್ರಾಮ ಪಂಚಾಯಿತಿ ಕಚೇರಿಯ ನೂತನ ಕಟ್ಟಡ, ಗ್ರಂಥಾಲಯ, ಅಂಗನವಾಡಿ ಕಟ್ಟಡ, ತ್ಯಾಜ್ಯ ವಿಲೇವಾರಿ ಘಟಕಗಳ ಉದ್ಘಾಟನೆ ನೆರವೇರಿಸಿ ನಂತರ ನಡೆದ ಸಭಾ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಸರಕಾರದ ಕೆಲಸ ದೇವರ ಕೆಲಸ ಎನ್ನುವ ರೀತಿಯಲ್ಲಿ ಪಂಚಾಯಿತಿಗಳಲ್ಲಿ ಕಾರ್ಯಗಳು ನಡೆಯಬೇಕು. ಹಳ್ಳಿಗಳು ಉದ್ಧಾರವಾದರೆ ದೇಶ ಉದ್ಧಾರವಾಗುತ್ತದೆ ಎನ್ನುವ ಗಾಂಧೀಜಿಯವರ ಮಾತಿನಂತೆ ಗ್ರಾ.ಪಂ, ತಾ.ಪಂ ಹಾಗೂ ಜಿ.ಪಂ ಮೂಲಕ ಅಧಿಕಾರ ವಿಕೇಂದ್ರೀಕರಣ ಕಾರ್ಯವನ್ನು ಮಾಡಿರುವ ಕೀರ್ತಿ ಮಾಜಿ ಮುಖ್ಯಮಂತ್ರಿ ದಿ. ರಾಮಕೃಷ್ಣ ದೊಡ್ಡಮನಿ ಮತ್ತು ಮಾಜಿ ನೀರಾವರಿ ಸಚಿವ ದಿ. ನಜೀರಸಾಬ ಅವರಿಗೆ ಸಲ್ಲುತ್ತದೆ. ರಾಜ್ಯ ಮತ್ತು ಕೇಂದ್ರ ಸರಕಾರಗಳ ಯೋಜನೆಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು, ಜನಪ್ರತಿನಿಧಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು. ಪಕ್ಷ ಎನ್ನುವದನ್ನು ಚುನಾವಣೆಯಲ್ಲಿ ಮಾತ್ರ ಮಾಡಿ ನಂತರ ಜ್ಯಾತ್ಯಾತೀತ, ಪಕ್ಷಾತೀತವಾಗಿ ಹಳ್ಳಿಗಳ ಅಭ್ಯುದಯಕ್ಕೆ ಶ್ರಮಿಸಿ ಎಂದು ಸಲಹೆ ನೀಡಿದರು.

> ಶಾಸಕ ಡಾ. ಚಂದ್ರು ಲಮಾಣಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಸರ್ಕಾರದಿಂದ ಅಭಿವೃದ್ಧಿ ಕಾರ್ಯಗಳಿಗೆ ಅನುದಾನವಿಲ್ಲದಿರುವುದರಿಂದ ಕಂಡ ಅಭಿವೃದ್ಧಿಯ ಕನಸು ನುಚ್ಚುನೂರಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಸಮಾಜದಲ್ಲಿ ಶಿಕ್ಷಣ, ಆರೋಗ್ಯ ಇವುಗಳಲ್ಲಿ ರಾಜಕೀಯ ಪ್ರವೇಶ ಮಾಡಬಾರದು. ಶಿಕ್ಷಣ ಕ್ಷೇತ್ರದಲ್ಲಿ ರಾಜಕೀಯ ಪ್ರವೇಶ ಮಾಡಿರುವದರಿಂದಲೇ ಖಾಸಗಿ ಶಾಲೆಗಳು ಹೆಚ್ಚು ತಲೆ ಎತ್ತುತ್ತಿವೆ. ಹೀಗಾಗಿ ಸರಕಾರಿ ಶಾಲೆಗಳಿಗೆ ಹಿನ್ನಡೆ ಉಂಟಾಗುತ್ತಿವೆ ಎಂದು ವಿಷಾದ ವ್ಯಕ್ತಪಡಿಸಿದರು. ರೈತ ಈ ದೇಶದ ಬೆನ್ನೆಲುಬು, ಅವರನ್ನು ಉದ್ಧಾರ ಮಾಡುತ್ತೇವೆ ಎಂದು ಅಧಿಕಾರಕ್ಕೆ ಬರುವ ರಾಜಕೀಯ ಮುಖಂಡರು ನಂತರ ಅವರನ್ನು ನೈಪಥ್ಯಕ್ಕೆ ಸರಿಸುತ್ತಾರೆ. ರಾಜ್ಯದಲ್ಲಿ ಪಂಚಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗಿರುವ ಬಗ್ಗೆ ಆಡಳಿತ ಪಕ್ಷದ ಶಾಸಕ, ಸಚಿವರೇ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಹಿಂದಿನ ಸರ್ಕಾರದ ಯೋಜನೆಗಳು, ಘೋಷಿಸಿದ ಅನುದಾನವೂ ಇಲ್ಲದ್ದರಿಂದ ರಾಜ್ಯದಲ್ಲಿ ಅಭಿವೃದ್ಧಿ ಕುಂಠಿತವಾಗುತ್ತಿದೆ ಎಂದು ಸರಕಾರದ ನಿಲುವಿಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಶಿಕ್ಷಣ, ಆರೋಗ್ಯ, ಅಭಿವೃದ್ಧಿ ಕಾರ್ಯದಲ್ಲಿ ಯಾರೂ ರಾಜಕೀಯ ಮಾಡಬಾರದು. ಅಡರಕಟ್ಟಿ ಆದರ್ಶ ಗ್ರಾಮವಾಗಿದ್ದು, ಗ್ರಾಮದ ಅಬ್ಯುಧಯಕ್ಕಾಗಿ ಹಿರಿಯರು ನೀಡಿದ ಕೊಡುಗೆ ಅನನ್ಯ ಎಂದು ನುಡಿದರು.

ಮುಕ್ತಿ ಮಂದಿರ ಧರ್ಮಕ್ಷೇತ್ರ ಸಂಪರ್ಕಿಸುವ ರಸ್ತೆಗಳು, ಕುಡಿಯುವ ನೀರು, ಯಾತ್ರಿ ನಿವಾಸಗಳ ಅಭಿವೃದ್ಧಿ ಸೇರಿ ಎಲ್ಲವೂ ಜಿಡ್ಡುಗಟ್ಟಿದೆ. ತ್ವರಿತವಾಗಿ ಅಭಿವೃದ್ಧಿ ಕೆಲಗಳಾದರೆ ಭಕ್ತರು, ಜನರು ಮೆಚ್ಚಿಕೊಳ್ಳುತ್ತಾರೆ ಎಂದು ಪಕ್ಕದಲ್ಲಿಯೇ ಇದ್ದ ಶಾಸಕ ಡಾ. ಚಂದ್ರು ಲಮಾಣಿ ಅವರಿಗೆ ಸೂಚ್ಯವಾಗಿ ತಿಳಿಸಿದರು.

ಮಾಜಿ ಶಾಸಕರುಗಳಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ ಮಾತನಾಡಿದರು. ರಾಜನಹಳ್ಳಿ ವಾಲ್ಮೀಕಿ ಮಹಾಸಂಸ್ಥಾನದ ಜ.ಶ್ರೀ ವಾಲ್ಮೀಕಿ ಜ.ಪ್ರಸನ್ನಾಂದ ಮಹಾಸ್ವಾಮಿಗಳು ಹಾಗೂ ಆದರಹಳ್ಳಿ ಗವಿಮಠದ ಮಹಾತಪಸ್ವಿ ಡಾ. ಕುಮಾರ ಮಹಾರಾಜರು ನೇತೃತ್ವ ವಹಿಸಿದ್ದರು.

> ಆಡಳಿತ ಯಂತ್ರವು ಸುಧಾರಣೆಯಾದಾಗ ಮಾತ್ರ ಸರಕಾರದ ಕಾರ್ಯಗಳು ಜನರಿಗೆ ಶೀಘ್ರ ತಲುಪುವಂತಾಗುತ್ತವೆ. ಗ್ರಾ.ಪಂ ಸದಸ್ಯರಿಗೆ ವಯಕ್ತಿಕ ಹಿತಾಸಕ್ತಿಯನ್ನು ಬಿಟ್ಟು ಊರಿನ ಹಿತಾಸಕ್ತಿಯನ್ನು ಕಾಪಾಡಿಕೊಳ್ಳಬೇಕೆನ್ನುವ ಮನೋಭಾವನೆ ಬೇಕಾಗಿದೆ. ಗ್ರಾಮ ಪಂಚಾಯಿತಿಯವರು ಉದ್ಯೋಗ ಖಾತ್ರಿ ಯೋಜನೆ ಅನುದಾನವನ್ನು ಬಳಸಿಕೊಳ್ಳಬೇಕು. ಕೇಂದ್ರ ರಾಜ್ಯ ಸರಕಾರಗಳ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ದೊರೆಯುವಂತೆ ಮಾಡುವದಕ್ಕೆ ಆದ್ಯತೆ ನೀಡಿ, ಪಕ್ಷಬೇಧ ಮರೆತು ಗ್ರಾಮದ ಅಭಿವೃದ್ಧಿಗೆ ಶ್ರಮಿಸಿ.
>
> – ಜಗದೀಶ ಶೆಟ್ಟರ.
> ಮಾಜಿ ಮುಖ್ಯಮಂತ್ರಿ, ಸಂಸದರು.

ಚನ್ನಪ್ಪ ಜಗಲಿ, ಎಸ್.ಪಿ. ಬಳಿಗಾರ, ಸುಜಾತಾ ದೊಡ್ಡಮನಿ, ಸುಶೀಲವ್ವ ಲಮಾಣಿ, ಗ್ರಾ.ಪಂ ಅಧ್ಯಕ್ಷೆ ಪ್ರೇಮಕ್ಕ ಮಾನಪ್ಪ ಲಮಾಣಿ, ಉಪಾಧ್ಯಕ್ಷೆ ಕಾಶವ್ವ ದೊಡ್ಡಮನಿ, ಸದಸ್ಯರುಗಳಾದ ನಿಂಗಪ್ಪ ಪ್ಯಾಟಿ, ಗಣೇಶ ನಾಯಕ್, ಸೋಮಪ್ಪ ಹವಳದ, ಹರೀಶ ಲಮಾಣಿ, ಪವಿತ್ರಾ ಗಡೆಪ್ಪನವರ, ಕಮಲವ್ವ ಲಮಾಣಿ, ಕವಿತಾ ಲಮಾಣಿ, ಲಕ್ಷ್ಮೀ ಕಾರಬಾರಿ ಹಾಗೂ ಸೋಮಕ್ಕ ತಳವಾರ ಮತ್ತು ಹಿರಿಯರಾದ ಚನ್ನಪ್ಪ ಹಳೆಮನಿ, ಸೋಮಣ್ಣ ಭಂಗಿ, ಕುಮಾರ ಚಕ್ರಸಾಲಿ, ಮಾನಪ್ಪ ಲಮಾಣಿ, ಮಹಾಂತೇಶ ಹವಳದ, ಮುತ್ತುರಾಜ ಗಡೆಪ್ಪನವರ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಇಓ ಕೃಷ್ಣಪ್ಪ ಧರ್ಮರ, ಪಿಡಿಓ ಸವಿತಾ ಸೋಮಣ್ಣವರ ಸೇರಿದಂತೆ ಅನೇಕರು ಹಾಜರಿದ್ದರು. ನಾಗರಾಜ ಪೂಜಾರ, ಡಿ.ಡಿ. ಲಮಾಣಿ ನಿರೂಪಿಸಿದರು.

### ಲೋಕಾಯುಕ್ತ ತನಿಖೆಯಲ್ಲಿ ಸಿಎಂ ಅವರಿಗೆ ಕ್ಲೀನ್ ಚಿಟ್ ನೀಡಿರುವದು ನಿರೀಕ್ಷಿತ: ಜಗದೀಶ ಶೆಟ್ಟರ

# ಬಿಜೆಪಿ ಹೋರಾಟ ಮುಂದುವರೆಸಲಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಡಾ ಹಗರಣದಲ್ಲಿ ಸಿದ್ದರಾಮಯ್ಯರಿಗೆ ಕ್ಲೀನ್ ಚಿಟ್ ನೀಡಿರುವದು ನಿರೀಕ್ಷಿತ ಬೆಳವಣಿಗೆ. ಲೋಕಾಯುಕ್ತ ಪೊಲೀಸರಿಂದ ತನಿಖೆಯಾದರೆ ನ್ಯಾಯ ಸಿಗದು ಎಂದು ಮೊದಲೇ ತಿಳಿದಿತ್ತು, ಈಗ ಹಾಗೆಯೇ ಆಗಿದೆ. ಆದರೆ ಇದರ ಬಗ್ಗೆ ಬಿಜೆಪಿ ಹೋರಾಟ ಮುಂದುವರೆಸಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ ಶೆಟ್ಟರ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕಿನ ಅಡರಕಟ್ಟಿ ಗ್ರಾಮದಲ್ಲಿ ಪತ್ರಕರ್ತರೊಂದಿಗೆ ಮಾತನಾಡುತ್ತಿದ್ದರು. ಲೋಕಾಯುಕ್ತದವರು ಮುಖ್ಯಮಂತ್ರಿಗಳ ಅಡಿಯಲ್ಲಿ ಕೆಲಸ ಮಾಡುವ ಅಧಿಕಾರಿಗಳಾಗಿರುತ್ತಾರೆ. ಅವರಿಂದ ನ್ಯಾಯ ಸಿಗುವುದಿಲ್ಲ ಎನ್ನುವದು ಎಲ್ಲರಿಗೂ ತಿಳಿದ ವಿಷಯವೇ. ರಾಜ್ಯದಲ್ಲಿ ಕಾನೂನು ವ್ಯವಸ್ಥೆ



ಸಂಪೂರ್ಣ ಕುಸಿದಿದ್ದು, ಕೊಲೆ, ಸುಲಿಗೆ, ಭ್ರಷ್ಟಾಚಾರ ಮಿತಿಮೀರಿದೆ. ಉದಯಗಿರಿ ಘಟನೆ ಇದಕ್ಕೆ ಮತ್ತೊಂದು ಉದಾಹರಣೆಯಾಗಿದ್ದು, ಹಳೆಹುಬ್ಬಳ್ಳಿಯಲ್ಲಿ ನಡೆದ ಘಟನೆಯ ಕೇಸ್ ವಾಪಸ್ಸು ತೆಗೆದುಕೊಂಡ ಪರಿಣಾಮವೇ ಈ ಉದಯಗಿರಿ ಘಟನೆ ಮರುಕಳಿಸಿದ್ದು ಎಂದು ಟೀಕಿಸಿದರು.

ಡಿಸಿಎಂ ಡಿಕೆಶಿ, ಬೆಂಗಳೂರು ಟ್ರಾಫಿಕ್ ವ್ಯವಸ್ಥೆ ಬಗ್ಗೆ ಪ್ರತಿಕ್ರರಿಯಿಸುವಾಗ 'ದೇವರೇ ಕಾಪಾಡಬೇಕು' ಎನ್ನುವ ಹೇಳಿಕೆ ನೀಡಿದ್ದು, ಅವರಿಂದ ಅಧಿಕಾರ ನಿಭಾಯಿಸಲಾಗದು ಎನ್ನುವದಕ್ಕೆ ಉದಾಹರಣೆಯಾಗಿದ್ದು, ಬೆಂಗಳೂರಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಇತ್ತು. ಅದನ್ನು ಸಂಪೂರ್ಣ ಹಾಳು ಮಾಡಿರುವ ಈ ಸರಕಾರದವರು, ಸರಕಾರವನ್ನು ಸಹ ದೇವರ ಕೈಯಲ್ಲಿಯೇ ಕೊಟ್ಟುಬಿಡಿ ಎಂದು ಲೇವಡಿ ಮಾಡಿದರು.

ಪ್ರಯಾಗರಾಜ್ ಕುಂಭಮೇಳದಿಂದ ಹಿಂದೂಗಳು ಒಕ್ಕಟ್ಟು ಹೆಚ್ಚಲಿದೆ. ಅಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಕೈಗೊಂಡ ವ್ಯವಸ್ಥೆಗೆ ಇಡೀ ವಿಶ್ವವೆ ಮೆಚ್ಚುಗೆ ಸೂಚಿಸಿದೆ. ಕುಂಭಮೇಳದಲ್ಲಿ ಕೊಟ್ಯಾಂತರ ಜನರು ಪವಿತ್ರ ಸ್ನಾನ ಮಾಡಿ ಪುನೀತರಾಗಿದ್ದಾರೆ. ಇದರ ಯಶಸ್ಸು ವಿರೋಧ ಪಕ್ಷಗಳಿಗೆ ಸಹಿಸಿಕೊಳ್ಳುವದಕ್ಕಾಗದೆ ಟೀಕಿಸುತ್ತಿದ್ದಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಶಾಸಕ ಡಾ.ಚಂದ್ರು ಲಮಾಣಿ ಇದ್ದರು.

> ಬಿಜೆಪಿಯಲ್ಲಿ ನಡೆದಿರುವ ಎಲ್ಲ ವಿದ್ಯಮಾನಗಳಿಗೂ ಪಕ್ಷದ ಹೈಕಮಾಂಡ್ ಇತಿಶ್ರೀ ಹಾಡಲಿದೆ. ವಿಶ್ವದಲ್ಲಿ ಅತಿ ಹೆಚ್ಚು ಸದಸ್ಯರನ್ನು ಹೊಂದಿರುವ ಅತಿದೊಡ್ಡ ಪಕ್ಷ ಬಿಜೆಪಿ ಆಗಿದ್ದು, ಸಣ್ಣಪುಟ್ಟ ಭಿನ್ನಮತಗಳು ಸಹಜ. ಶೀಘ್ರದಲ್ಲಿ ಎಲ್ಲವೂ ಸುಖಾಂತ್ಯಗೊಳ್ಳಲಿವೆ. ರಾಜ್ಯಾಧ್ಯಕ್ಷರ ಬಗ್ಗೆಯೂ ಇಷ್ಟರಲ್ಲಿಯೇ ಹೈಕಮಾಂಡ್ ನಿರ್ಧರಿಸಲಿದೆ ಎಂದು ಸಂಸದ ಜಗದೀಶ ಶೆಟ್ಟರ ಪ್ರತಿಕ್ರಿಯಿಸಿದರು

# ಭಾವೈಕ್ಯತೆಯ ಗಂಧ ಮೆರವಣಿಗೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಮೀಪದ ಸಂಭಾಪೂರ ಕ್ರಾಸ್‌ನಲ್ಲಿರುವ ದಾವಲ್ ಮಲಿಕ್ ದರ್ಗಾದ 25ನೇ ವರ್ಷದ ಉರುಸ್ ಅಂಗವಾಗಿ ಸಂದಲ್(ಗಂಧ) ಮೆರವಣಿಗೆ ಹಿಂದೂ – ಮುಸ್ಲಿಂ ಭಾಂದವರ ಪಾಲ್ಗೊಳ್ಳುವಿಕೆಯಲ್ಲಿ ಸಂಭ್ರಮದಿಂದ ಜರುಗಿತು.

ಇಲ್ಲಿಯ ಅಂಬೇಡ್ಕರ ನಗರದಲ್ಲಿರುವ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಅವರ ಮನೆಯಲ್ಲಿ ವಿಧಿ ವಿಧಾನಗಳೊಂದಿಗೆ ಪ್ರಾರ್ಥನೆ ಸಲ್ಲಿಸಿದ ನಂತರ ಗಂಧ ಮೆರವಣಿಗೆಯು ಆರಂಭವಾಯಿತು. ಕೆ.ಎಸ್. ಪೂಜಾರ ಪುತ್ರ ಆಕಾಶ ಕೆಂಚಪ್ಪ ಪೂಜಾರ ಗಂಧವನ್ನು ಹೊತ್ತುಕೊಂಡು ಮೆರವಣಿಗೆಯಲ್ಲಿ ಸಾಗಿದ್ದು ಹಿಂದೂ ಮುಸ್ಲಿಂ ಭಾಂದವರ ಭಾವೈಕ್ಯತೆಗೆ ಸಾಕ್ಷಿಯಾಯಿತು. ಮೆರವಣಿಗೆಯಲ್ಲಿ ಲಕ್ಕುಂಡಿ ಪ್ರಾದೇಶಿಕ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸದಸ್ಯರಾದ ಪೀರಸಾಬ ನದಾಫ್, ಬಸವರಾಜ ಯಲಿಶಿರುಂಜ, ಮಹಾಂತೇಶ ಕಮತರ, ಲಕ್ಷ್ಮಣ ಗುಡಸಲಮನಿ ಸೇರಿದಂತೆ ಗ್ರಾಮದ ಹಿಂದೂ-ಮುಸ್ಲಿಂ ಗಣ್ಯರು, ಯುವಕರು ಪಾಲ್ಗೊಂಡಿದ್ದರು.

ಗ್ರಾಮದ ಅತ್ತಿಮುಬ್ಬೆ ಮಹಾದ್ವಾರ ಮೂಲಕ ಬಜಾರ ರಸ್ತೆಯಿಂದ ಹಿರೆಮಸೂತಿಯ ರಸ್ತೆಯ ಮೂಲಕ ಮೆರವಣಿಗೆ ಸಂಚರಿಸಿ ಸಂಭಾಪೂರ ಕ್ರಾಸ್‌ನಲ್ಲಿ ದಾವಲ್ ಮಲಿಕ್ ದರ್ಗಾದಲ್ಲಿ ಪ್ರಾರ್ಥನೆ ಸಲ್ಲಿಸಿ ಗಂಧವನ್ನು ಗದ್ದುಗೆಗೆ ತಲುಪಿಸಲಾಯಿತು. ದಾ-ರಿಯುದ್ದಕ್ಕೂ ಪುಟ್ಟರಾಜ ಮೆಲೋಡಿಸ್ ಅವರಿಂದ ನಡೆದ ರಸಮಂಜರಿ ಕಾರ್ಯಕ್ರಮ ಮನರಂಜಿಸಿತು.

### ಶ್ರೀನಿವಾಸ ಸೇವಾ ಪ್ರತಿಷ್ಠಾನ ಉದ್ಘಾಟಿಸಿದ ಯುವ ಮುಖಂಡ ಕೃಷ್ಣಗೌಡ ಪಾಟೀಲ

# ಯುವಕರು ಸಮಾಜಮುಖಿ ಕೆಲಸ ಮಾಡಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಜನಸೇವೆ ಮಾಡುವ ಉದ್ದೇಶದೊಂದಿಗೆ ಸುಭಾಸ ಲಮಾಣಿಯವರ ಅಧ್ಯಕ್ಷತೆಯಲ್ಲಿ ಶ್ರೀನಿವಾಸ ಸೇವಾ ಪ್ರತಿಷ್ಠಾನ ಪ್ರಾರಂಭಿಸಿರುವುದು ಶ್ಲಾಘನೀಯ. ಈ ಪ್ರತಿಷ್ಠಾನಕ್ಕೆ ಸಮಾಜದ ಯುವಕರು ಕೈ ಜೋಡಿಸಿ ಸಮಾಜಪರ ಕೆಲಸ ಮಾಡಬೇಕು. ಅಲ್ಲದೇ ವೈಯಕ್ತಿಕವಾಗಿ ನಾನು ಸಹ ಈ ಪ್ರತಿಷ್ಠಾನದ ಜೊತೆ ಸದಾ ಇರುವುದಾಗಿ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ನಗರದ ಐಎಂಎ ಹಾಲ್‌ನಲ್ಲಿ ಶ್ರೀನಿವಾಸ ಸೇವಾ ಪ್ರತಿಷ್ಠಾನದ ಉದ್ಘಾಟನಾ ಸಮಾರಂಭ ಹಾಗೂ ಶ್ರೀ ಸಂತ ಸೇವಾಲಾಲರ 286ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಜಿ.ಬಿ. ಬಿಡನಾಳ ಮಾತನಾಡಿ, ನಾನು ಗ್ರಾಮೀಣ ಪ್ರದೇಶದ ಬಡಕುಟುಂಬದಲ್ಲಿ ಬೆಳೆದು ಬಂಜಾರ ಸಮುದಾಯದವರೊಂದಿಗೆ ನಿಕಟ ಸಂಬಂಧ ಹೊಂದಿದ್ದೇನೆ ಎಂದರು.

ಇದೇ ಸಂದರ್ಭದಲ್ಲಿ ಸುಭಾಸ ಲಮಾಣಿ ಹಾಗೂ ಕಾರ್ಯದರ್ಶಿ ಶಶಿಕಲಾ ಎಸ್.ಲವಾಣಿಯವರನ್ನು ವೇದಿಕೆಯಲ್ಲಿದ್ದ ಎಲ್ಲ ಗಣ್ಯ ಮಾನ್ಯರು ಸನ್ಮಾನಿಸಿ ಗೌರವಿಸಿದರು.

> ನ್ಯಾಯವಾದಿ ರವಿಕಾಂತ ಅಂಗಡಿ ಮಾತನಾಡಿ, ನಮ್ಮ ಹಿಂದುಳಿದ ಸಮಾಜದಲ್ಲಿ ಇಂತಹ ಸೇವಾ ಪ್ರತಿಷ್ಠಾನ ಹುಟ್ಟುಹಾಕಿ ಸೇವಾ ಪ್ರತಿಷ್ಠಾನದ ವತಿಯಿಂದ ಅಂಗವಿಕಲರ ಸಲಕರಣೆಗಳನ್ನು ಉಚಿತವಾಗಿ ವಿತರಿಸಿ ಮಾನವೀಯ ಮೌಲ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಹೋಗುತ್ತಿರುವ ಸುಭಾಸ ಲಮಾಣಿಯವರ ಸೇವಾ ಕಾರ್ಯ ಇನ್ನಷ್ಟು ಬೆಳೆಯಲಿ ಎಂದು ಶುಭ ಹಾರೈಸಿದರು.

ಚಂದ್ರಕಾಂತ ಚವ್ಹಾಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಆಯುಷ್ ಅಧಿಕಾರಿ ಜೈಪಾಲಸಿಂಗ್ ಸಮೋರಕರ, ಡಿಎಸ್‌ಓ ವೆಂಕಟೇಶ ರಾಠೋಡ, ಐ.ಎಸ್. ಪೂಜಾರ, ಬಂಜಾರ ಸಮುದಾಯದ ಮುಖಂಡರಾದ ದಯಾನಂದ ಪವಾರ, ಸುರೇಶ ಮಹಾರಾಜ ಲಮಾಣಿ ಮುಂತಾದವರಿದ್ದರು. ರಾಘು ಶಾಂತಗೇರಿ ಕಾರ್ಯಕ್ರಮ ನಿರೂಪಿಸಿದರು.

ಡಾ. ಸಂಜೀವ ನಾರಪ್ಪನವರ, ಶಿವಪ್ಪ ನಾಯಕ, ಲಕ್ಷ್ಮಣ ದೇವಲಪ್ಪ ಲಮಾಣಿ, ಚನ್ನಪ್ಪ ದೇವಲಪ್ಪ ಲಮಾಣಿ, ತೇಜಪ್ಪ ಲಕ್ಷ್ಮಣ ಲಮಾಣಿ, ತೇಜಪ್ಪ ಕಟ್ಟಿಮನಿ, ಸುರೇಶ ಪವಾರ, ಲೋಕೇಶ ಕಟ್ಟಿಮನಿ, ಕುಬೇರಪ್ಪ ಪವಾರ, ವಿಠ್ಠಲ ಪೂಜಾರ, ಠಾಕ್ರಪ್ಪ ಉ.ಚನ್ನಳ್ಳಿ, ಠಾಕೂರ ಬ.ಲಮಾಣಿ, ಮಲ್ಲಿಕಾರ್ಜುನ ಖಂಡಮ್ಮನವರ, ಉಮೇಶ ಲಮಾಣಿ, ರೂಪಾಬಾಯಿ ಜಾಧವ ಮುಂತಾದವರು ಪಾಲ್ಗೊಂಡಿದ್ದರು.

## ಸಂಪಾದಕೀಯ

# ಮತ್ತೆ ಪುಂಡಾಟಿಕೆ ಮೆರೆದ ಮರಾಠಿಗರು

ಮಹಾರಾಷ್ಟ್ರದಲ್ಲಿ ಕನ್ನಡಿಗರ ಮೇಲೆ ಮತ್ತೆ ಮರಾಠಿಗರ ಪುಂಡಾಟ ಮೆರೆದಿದ್ದಾರೆ. ಮರಾಠಿ ಬರುವುದಿಲ್ಲ ಎಂದ ಕಾರಣಕ್ಕೆ ಬಸ್ ಕಂಡಕ್ಟರ್ ಒಬ್ಬರನ್ನ ಮರಾಠಿಗರ ಗುಂಪು ಥಳಿಸಿರುವುದು, ಕನ್ನಡಿಗರ ಭಾವನೆಯನ್ನ ಕೆರಳಿಸಿದೆ. ಮರಾಠಿ ಪುಂಡರ ಕೃತ್ಯಕ್ಕೆ ಪ್ರತಿಯಾಗಿ ಚಿತ್ರದುರ್ಗದಲ್ಲಿ ಮಹಾರಾಷ್ಟ್ರದ ಬಸ್ ಚಾಲಕರಿಗೆ ಕಪ್ಪುಮಸಿ ಬಳಿಯಲಾಗಿದೆ.

ಕರವೇ ಕಾರ್ಯಕರ್ತರು ಮಸಿ ಬಳೆದಿರುವುದು ತಪ್ಪು. ಆದರೆ ಮರಾಠಿ ಪುಂಡರು ಮಾಡಿದ ಕೃತ್ಯಕ್ಕೆ ಪ್ರತ್ಯುತ್ತರ ಮತ್ತು ಪ್ರತಿಕ್ರಿಯೆ ನೀಡಬೇಕು ಎನ್ನುವ ಕಾರಣಕ್ಕೆ ಆ ರೀತಿ ಮಾಡಿದ್ದು ಸರಿ ಇದೆ. ಮರಾಠಿಗರು ಕ್ಷುಲ್ಲಕ ಕಾರಣಕ್ಕಾಗಿ ಹಲ್ಲೆ ನಡೆಸಿದ ರೀತಿಯಲ್ಲಿ, ಮರಾಠಿಗರ ಮೇಲೆ ಹಲ್ಲೆ ನಡೆಸದೇ ಕೇವಲ ಕಪ್ಪುಮಸಿ ಬಳಿದು ಕಳಿಸಿದ್ದು ಕನ್ನಡಿಗರ ಹೃದಯ ವೈಶಾಲ್ಯತೆಯನ್ನು ತೋರಿಸುತ್ತದೆ.

ಹೀಗೆ ಕರ್ನಾಟಕ ಮತ್ತು ಮಹಾರಾಷ್ಟ್ರ ಗಡಿಯಲ್ಲಿ ಈ ರೀತಿ ಭಾಷೆಯ ವಿಷಯವಾಗಿ ಘರ್ಷಣೆಗಳು ನಡೆಯುತ್ತಲೇ ಇವೆ. ಪ್ರಮುಖ ರಾಷ್ಟ್ರೀಯ ಪಕ್ಷಗಳು ಈ ಘರ್ಷಣೆಯನ್ನು ತಮ್ಮ ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಲೇ ಇವೆ. ಎರಡು ರಾಜ್ಯದ ರಾಜಕಾರಣಿಗಳು ಕನ್ನಡಿಗರು ಮತ್ತು ಮರಾಠಿಗರ ಹೆಸರಿನಲ್ಲಿ ಗಡಿಯಲ್ಲಿ ರಾಜಕಾರಣ ನಡೆಸುತ್ತಿರುವುದು ಇಂದು ನಿನ್ನೆಯದಲ್ಲ.

ಈ ವಿಚಾರದಲ್ಲಿ ಗಡಿ ಭಾಗದ ಜನ ಎಚ್ಚೆತ್ತುಕೊಳ್ಳಬೇಕು. ಭಾಷಾ ವಿಷಯದಲ್ಲಿ ಉಂಟಾಗುವ ಗದ್ದಲ ರಾಜಕೀಯ ಲಾಭಕ್ಕಾಗಿ ನಡೆಯುತ್ತಿದೆ ಎಂಬುದನ್ನು ಅರ್ಥಮಾಡಿಕೊಳ್ಳಬೇಕು. ಮುಖ್ಯವಾಗಿ ನಾವೆಲ್ಲರೂ ಭಾರತೀಯರು. ನಮ್ಮ ಭಾಷೆ ಬೇರೆ ಬೇರೆಯಾದರೂ ವಿವಿಧತೆಯಲ್ಲಿ ಏಕತೆಯನ್ನು ಸಾಧಿಸಿಕೊಂಡವರು ಎನ್ನುವುದನ್ನು ಅರಿತುಕೊಳ್ಳಬೇಕು.

ಇಂತಹ ಘಟನೆಗಳು ನಿಲ್ಲಬೇಕಾದರೆ ಆಯಾ ರಾಜ್ಯದ ಸರ್ಕಾರಗಳು ತಕ್ಷಣ ಅದಕ್ಕೆ ಪ್ರತಿಸ್ಪಂದನೆಯನ್ನು ನೀಡಬೇಕು. ಇಲ್ಲದಿದ್ದಲ್ಲಿ ಈ ವೈಷಮ್ಯ ಮತ್ತಷ್ಟು ಬೆಳೆಯುತ್ತಲೇ ಸಾಗುತ್ತದೆ.

---

**ಸಾಹಿತ್ಯ ಸಮ್ಮೇಳನದ ಸಮಾರೋಪ, ಶ್ರೀ ಗುರು ಕುಮಾರೇಶ್ವರರ ಸ್ಮರಣೋತ್ಸವ ಸಮಾರಂಭದಲ್ಲಿ ಶ್ರೀ ದಿಂಗಾಲೇಶ್ವರ ಸ್ವಾಮೀಜಿ**

# ಕನ್ನಡ ಭಾಷೆಗೆ ಒಂದು ಗತ್ತಿದೆ, ತಾಕತ್ತಿದೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜಗತ್ತಿನ ಎಲ್ಲ ಭಾಷೆಗಳಿಗಿಂತ ಕನ್ನಡ ಭಾಷೆಗೊಂದು ಗತ್ತಿದೆ, ತಾಕತ್ತಿದೆ. ಅದನ್ನು ಬಲ್ಲವರೇ ಬಲ್ಲರು. ಕನ್ನಡ ಭಾಷೆಗಿರುವ ತಾಕತ್ತೇ ನಮಗೆ ಎಂಟು ಜ್ಞಾನಪೀಠ ಪ್ರಶಸ್ತಿಗಳನ್ನು ತಂದುಕೊಟ್ಟಿದೆ. ಇಷ್ಟೊಂದು ಜ್ಞಾನಪೀಠ ಪ್ರಶಸ್ತಿಗಳು ದೇಶದ ಬೇರಾವ ಭಾಷೆಗೂ ದೊರಕದೆ ಇರುವುದೇ ನಮ್ಮ ಕನ್ನಡ ಭಾಷೆಯ ತಾಕತ್ತು ಎಂದು ಶಿರಹಟ್ಟಿಯ ಶ್ರೀ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

ಸಮೀಪದ ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದಲ್ಲಿ ನಡೆದ ಗಜೇಂದ್ರಗಡ ತಾಲೂಕಿನ ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನದ ಸಮಾರೋಪ ಮತ್ತು ಶ್ರೀ ಗುರು ಕುಮಾರೇಶ್ವರರ ಪುಣ್ಯ ಸ್ಮರಣೋತ್ಸವ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಕನ್ನಡವನ್ನು ಉಚ್ಚಾರಣೆ ಮಾಡುವಾಗ ಬಹಳಷ್ಟು ಎಚ್ಚರಿಕೆಯಿಂದ ಬಳಸಬೇಕು. ಏಕೆಂದರೆ ಒಂದು ಶಬ್ದ ಆಚೀಚೆ ಆದರೂ ಅದರ ಅರ್ಥವೇ ಬೇರೆಯಾಗುತ್ತದೆ. ಆದ್ದರಿಂದ ಕನ್ನಡದ ಶಬ್ದಗಳನ್ನು




ಜಾಗರೂಕತೆಯಿಂದ ಬಳಸಬೇಕು. ಅಲ್ಪಪ್ರಾಣ, ಮಹಾಪ್ರಾಣಗಳು ಕನ್ನಡವನ್ನು ಹೊರತುಪಡಿಸಿದರೆ ಬೇರೆ ಯಾವ ಭಾಷೆಯಲ್ಲಿಯೂ ಇಲ್ಲ. ಈ ಪ್ರಾಣಗಳನ್ನು ಸರಿಯಾಗಿ ಬಳಸದೆ ಹೋದರೆ ಮತ್ತೊಬ್ಬರ ಪ್ರಾಣವನ್ನೇ ತೆಗೆಯುವ ಸಂದರ್ಭ ಬರಬಹುದು ಎಂದು ಶ್ರೀಗಳು ವಿನೋದವಾಗಿ ಹೇಳಿದರು.

ಹರಪನಹಳ್ಳಿಯ ಭೀಮವ್ವ, ಲಕ್ಕುಂಡಿಯ ಅತ್ತಿಮಬ್ಬೆ, 12ನೇ ಶತಮಾನದ ವಚನಗಾರ್ತಿಯರು ಬರೆದ ಸಾಹಿತ್ಯವನ್ನು ನಾವೆಲ್ಲ ಓದುವ ರೂಢಿಯನ್ನು ಬೆಳೆಸಿಕೊಳ್ಳಬೇಕಿದೆ. ಅವುಗಳನ್ನು ಅರ್ಥೈಸಿಕೊಂಡು ಜೀವನದಲ್ಲಿ ಸಾಹಿತ್ಯದ ರುಚಿಯನ್ನು ಬೆಳಸಿಕೊಳ್ಳಬೇಕು. ಕನ್ನಡ ಭಾಷೆಯ ಅಭಿಮಾನವನ್ನು ಬೆಳೆಸಿಕೊಳ್ಳಿ. ಇಂಗ್ಲೀಷ್‌ನ ವ್ಯಾಮೋಹಕ್ಕೆ ಬಿದ್ದು ಹಾಳಾಗಬೇಡಿ ಎಂದು ಕಿವಿ ಮಾತು ಹೇಳಿದರು.

ನಿಡಗುಂದಿಕೊಪ್ಪದ ಶ್ರೀಮಠದಲ್ಲಿ ಗಜೇಂದ್ರಗಡ ತಾಲೂಕಿನ ಮೊತ್ತಮೊದಲ ಸಾಹಿತ್ಯ ಸಮ್ಮೇಳನವನ್ನು ಏರ್ಪಡಿಸುವ ಮೂಲಕ ಅಭಿನವ ಚನ್ನಬಸವ ಸ್ವಾಮೀಜಿ ಅತ್ಯಂತ ಸ್ತುತ್ಯವಾದ ಕಾರ್ಯ ಮಾಡಿದ್ದಾರೆ. ಅವರಿಗೆ ಎಲ್ಲ ರೀತಿಯ ಬೆಂಬಲ ನೀಡಿದ ಶಾಸಕ ಜಿ.ಎಸ್. ಪಾಟೀಲ, ಜಿಲ್ಲಾ ಮತ್ತು ತಾಲೂಕಾ ಕಸಾಪ ಅಧ್ಯಕ್ಷರು, ಪದಾಧಿಕಾರಿಗಳನ್ನು ತಾವು ಹೃತ್ಪೂರ್ವಕವಾಗಿ ಅಭಿನಂದಿಸುವದಾಗಿ ಶ್ರೀಗಳು ಹೇಳಿದರು. ಇದೇ ಸಂದರ್ಭದಲ್ಲಿ ಶ್ರೀ ಚನ್ನಬಸವೇಶ್ವರ ಚರಿತ್ರೆ ಮತ್ತು ಶಾಖಾ ಶಿವಯೋಗ ಮಂದಿರ ಪ್ರಭೆ, ಶಿವಯೋಗ ಚೇತನ ಗ್ರಂಥಗಳು ಬಿಡುಗಡೆಯಾದವು.

ಸಾನ್ನಿಧ್ಯ ವಹಿಸಿದ್ದ ಅಭಿನವ ಚನ್ನಬಸವ ಸ್ವಾಮೀಜಿ, ಅಂಕಲಗಿಯ ಅಡವಿಸಿದ್ಧೇಶ್ವರ ಸ್ವಾಮೀಜಿ, ಸರ್ವಾಧ್ಯಕ್ಷ ಎಂ.ಎ. ಹಿರೇವಡೆಯರ, ಚಿಂತಕ ಬಿ.ಎ. ಕೆಂಚರೆಡ್ಡಿ ಆಶಯ ನುಡಿ ನುಡಿದರು. ಶಾಸಕ ಜಿ.ಎಸ್. ಪಾಟೀಲ, ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾಲೂಕಾಧ್ಯಕ್ಷ ಅಮರೇಶ ಗಾಣಿಗೇರ, ಮಿಥುನ ಪಾಟೀಲ, ವಿ.ಬಿ. ಸೋಮನಕಟ್ಟಿಮಠ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

> ಯಾರ ತಲೆಯಲ್ಲಿ ಒಳ್ಳೆಯ ವಿಚಾರಗಳು ಬರುತ್ತವೆಯೋ ಅವರಿಂದ ಉತ್ತಮ ಸಾಹಿತ್ಯ ರಚನೆ ಸಾಧ್ಯವಾಗುತ್ತದೆ. ನೀವು ಧಾರಾವಾಹಿಯ ಮೋಡಿಯಿಂದ ಹೊರಬಂದು ಸಾಹಿತ್ಯವನ್ನು ಓದುವ, ಬರೆಯುವ ಕಡೆಗೆ ಗಮನ ನೀಡಬೇಕು. ನಿಮ್ಮೆಲ್ಲರ ಶೈಕ್ಷಣಿಕ ಮಟ್ಟವನ್ನು ಎತ್ತರಿಸಬೇಕೆಂದು ಹಾನಗಲ್ಲ ಗುರು ಕುಮಾರೇಶ್ವರರು ನಾಡಿನಾದ್ಯಂತ ಅನೇಕ ಶೈಕ್ಷಣಿಕ ಹುಟ್ಟು ಹಾಕುವಲ್ಲಿ ಪ್ರೇರಣೆ ನೀಡಿದ್ದು ಇಂದಿನ ಸಾಹಿತ್ಯ ಸಮ್ಮೇಳನಕ್ಕೆ ನಾಂದಿ ಎಂದು ಶ್ರೀ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

---

**ಲಿಂಗಾಯತ ಮಠಾಧಿಪತಿಗಳ ಒಕ್ಕೂಟದಲ್ಲಿ ಶ್ರೀ ಅದೃಶ್ಯ ಕಾಡಸಿದ್ಧೇಶ್ವರ ಶ್ರೀಗಳ ಹೇಳಿಕೆಗೆ ಖಂಡನೆ**

# ಶ್ರೀಗಳು ಬಸವಾನುಯಾಯಿಗಳ ಕ್ಷಮೆ ಕೋರಲಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕನೇರಿ ಕಾಡಸಿದ್ಧೇಶ್ವರಮಠದ ಶ್ರೀ ಅದೃಶ್ಯ ಕಾಡಸಿದ್ಧೇಶ್ವರ ಶ್ರೀಗಳು ಇತ್ತೀಚೆಗೆ ಸುವರ್ಣ ಟಿ.ವಿ. ವಾಹಿನಿಯ ಸಂದರ್ಶನದಲ್ಲಿ ಬಸವಾನುಯಾಯಿಗಳನ್ನು 'ತಾಲಿಬಾನಿ'ಗಳೆಂದು ನಿಂದಿಸಿರುವುದು ಅಕ್ಷಮ್ಯ. ಮಹಾಮಾನವತಾವಾದಿ ಬಸವಣ್ಣನವರು ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದವರು. ಅವರ ಆದರ್ಶಗಳನ್ನೇ ತಮ್ಮ ಬದುಕಿನ ಗುರಿಯಾಗಿಸಿಕೊಂಡ ಬಸವಾನುಯಾಯಿಗಳು ಇತರರಿಗೆ ಭೀತಿಯನ್ನುಂಟು ಮಾಡುವವರಲ್ಲ. ಕೊಲೆ-ಸುಲಿಗೆಗಳಲ್ಲಿ ಭಾಗಿಯಾದವರಲ್ಲ. ವಸ್ತುಸ್ಥಿತಿ ಹೀಗಿದ್ದರೂ ಅವರನ್ನು ತಾಲಿಬಾನಿಗಳೆಂದು ಬಸವಪರಂಪರೆಯವರೇ ಆದ ಕನೇರಿ ಶ್ರೀಗಳು ಜರಿದಿರುವುದು ಅಸಹನೆಯ ಮತ್ತು ಅಜ್ಞಾನದ ಪರಮಾವಧಿ ಎಂದು ಖಂಡಿಸಿದ ಲಿಂಗಾಯತ ಮಠಾಧಿಪತಿಗಳು ಶ್ರೀ ಕಾಡಸಿದ್ಧೇಶ್ವರ ಶ್ರೀಗಳು ಬಸವಾನುಯಾಯಿಗಳ ಕ್ಷಮೆ ಕೋರಬೇಕೆಂದು ಆಗ್ರಹಿಸಿದ್ದಾರೆ.



ಧಾರವಾಡದಲ್ಲಿ ಸಭೆ ಸೇರಿದ ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಸದಸ್ಯರಾಗಿರುವ ಶ್ರೀಗಳೆಲ್ಲರೂ ಕನೇರಿ ಶ್ರೀ ಕಾಡಸಿದ್ಧೇಶ್ವರ ಶ್ರೀಗಳ ಈ ನಡೆಯನ್ನು ತೀವ್ರವಾಗಿ ಖಂಡಿಸಿದರು. ಕೃಷಿ, ಶಿಕ್ಷಣ, ಆರೋಗ್ಯ ಮುಂತಾದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಶ್ರೀಗಳು ತಮ್ಮ ಈ ಅಸಹಿಷ್ಣುತೆಯ ನಡೆಯಿಂದಾಗಿ ನಾಡಿನ ಎಲ್ಲ ಬಸವಪ್ರೇಮಿಗಳ ಮತ್ತು ಬಸವಾನುಯಾಯಿಗಳ ಆಕ್ರೋಶಕ್ಕೆ ಗುರಿಯಾಗಿದ್ದಾರೆ. ಭಾರತೀಯ ಸಂವಿಧಾನವು ಎಲ್ಲ ಧರ್ಮೀಯರಿಗೂ ಈ ದೇಶದಲ್ಲಿ ಸೌಹಾರ್ದತೆಯಿಂದ ಮತ್ತು ಶಾಂತಿಯಿಂದ ಬದುಕುವುದಕ್ಕೆ ಅವಕಾಶ ಕಲ್ಪಿಸಿದೆ. ಹಿಂದುತ್ವ ಪ್ರತಿಪಾದನೆಯ ಅತಿರೇಕದಲ್ಲಿ ಅಸಹನೆಯ ಭಾವವನ್ನು ವ್ಯಕ್ತಪಡಿಸುವುದು ಸಾಧುವಾದ ಕ್ರಮವಲ್ಲ. ಸಭೆಯಲ್ಲಿ ಮಾರ್ಗದರ್ಶಕರಾದ ಸಾಣೇಹಳ್ಳಿಯ ಡಾ. ಪಂಡಿತಾರಾಧ್ಯ ಶಿವಾಚಾರ್ಯರು, ಅಧ್ಯಕ್ಷರಾದ ಭಾಲ್ಕಿಯ ಡಾ. ಬಸವಲಿಂಗ ಪಟ್ಟದ್ದೇವರು, ಬಸವಧರ್ಮಪೀಠದ ಡಾ. ಗಂಗಾ ಮಾತಾಜಿಯವರು, ಗದಗ ತೋಂಟದಾರ್ಯ ಮಠದ ಡಾ. ತೋಂಟದ ಸಿದ್ಧರಾಮ ಸ್ವಾಮಿಗಳು, ಬೆಳಗಾವಿಯ ಡಾ. ಅಲ್ಲಮಪ್ರಭು ಸ್ವಾಮಿಗಳು, ಒಕ್ಕೂಟದ ಕಾರ್ಯದರ್ಶಿಗಳಾಗಿರುವ ಹಂದಿಗುಂದದ ಶ್ರೀ ಶಿವಾನಂದ ಸ್ವಾಮಿಗಳು, ಸಂಘಟನಾ ಕಾರ್ಯದರ್ಶಿ ಅಥಣಿಯ ಶ್ರೀ ಪ್ರಭುಚನ್ನಬಸವ ಸ್ವಾಮಿಗಳು ಮತ್ತು ಇತರ ಮಠಾಧಿಪತಿಗಳು ಭಾಗವಹಿಸಿದ್ದರು.

> ಬೊಗಳು-ತೆಗಳು ಮುಂತಾದವು ಮಠಾಧಿಪತಿಗಳ ಬಾಯಲ್ಲಿ ಬರುವ ಶಬ್ದಗಳೂ ಅಲ್ಲ. ಇದನ್ನರಿತು ಶ್ರೀಗಳು ಆವೇಗದಲ್ಲಿ ಜರುಗಿದ ಈ ಘಟನೆಗೆ ವಿಷಾದ ವ್ಯಕ್ತಪಡಿಸಿ ಪ್ರೀತಿ, ವಿಶ್ವಾಸ ಹಾಗೂ ಸೌಹಾರ್ದತೆಯನ್ನು ಪ್ರದರ್ಶಿಸಬೇಕೆಂದು ಒಕ್ಕೂಟದ ಶ್ರೀಗಳೆಲ್ಲರೂ ಆಗ್ರಹಪೂರ್ವಕ ಒತ್ತಾಯಿಸಿದ್ದಾರೆ.

---

**ಶ್ರೀ ಕಾಳಿಕಾದೇವಿ ದೇವಸ್ಥಾನದ ಲಕ್ಷದೀಪೋತ್ಸವ ಕಾರ್ಯಕ್ರಮದಲ್ಲಿ ಡಾ. ಸಿದ್ಧವೀರ ಶಿವಾಚಾರ್ಯ ಸ್ವಾಮೀಜಿ**

# ವಿಶ್ವಕರ್ಮರ ಕಲೆಗೆ ಬೆಲೆ ಕಟ್ಟಲಾಗದು



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪ್ರಕೃತಿಯಲ್ಲಿ ನೈಸರ್ಗಿಕವಾಗಿ ದೊರೆಯುವ ಮಣ್ಣು, ಕಟ್ಟಿಗೆ, ಕಲ್ಲು, ಬಂಗಾರ, ಬೆಳ್ಳಿ ಸೇರಿದಂತೆ ವಿವಿಧ ವಸ್ತುಗಳಿಗೆ ಜೀವ ತುಂಬುವ ಕಲೆಯನ್ನು ಕರಗತ ಮಾಡಿಕೊಂಡು ವಿಶ್ವಕರ್ಮ ಸಮಾಜ ಇಂದು ಕುಶಲಕರ್ಮಿಗಳಾಗಿ ಸಮಾಜದಲ್ಲಿ ತಮ್ಮ ಸೇವೆ ಸಲ್ಲಿಸುತ್ತಿದ್ದಾರೆ. ಕಲೆ ಗುರುತಿಸಿಕೊಟ್ಟ ಏಕೈಕ ಸಮಾಜವೆಂದರೆ ಅದುವೇ ವಿಶ್ವಕರ್ಮ ಸಮಾಜ ಎಂದು ನರಗುಂದ ಪತ್ರಿವನಮಠದ ಡಾ. ಸಿದ್ಧವೀರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ಹೊಸಪೇಟೆ ಓಣಿಯಲ್ಲಿರುವ ಶ್ರೀ ಕಾಳಿಕಾ ದೇವಿ ದೇವಸ್ಥಾನದ ಲಕ್ಷದೀಪೋತ್ಸವ ಕಾರ್ಯಕ್ರಮದ ನಿಮಿತ್ತ ಜರುಗಿದ ಶ್ರೀ ಕಾಳಿಕಾ ದೇವಿ ಸಮುದಾಯ ಭವನ ಉದ್ಘಾಟನೆ, ಧಾರ್ಮಿಕ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಯೋಜನವಿಲ್ಲವೆಂದು ಮೂಲೆಗಿರಿಸುವ ಮರ, ಲೋಹ ಹಾಗೂ ಕಲ್ಲಿಗೆ ಸುಂದರ ಆಕೃತಿ ನೀಡಿ ಶಿಲೆಯನ್ನಾಗಿಸುವ ನೈಪುಣ್ಯತೆ ವಿಶ್ವಕರ್ಮರಿಗೆ ಇದೆ. ಈ ಸಮಾಜದವರು ಎಲೆಮರೆಯ ಕಾಯಿಯಂತೆ ಇದ್ದು, ವಸ್ತುವಿಗೆ ರೂಪವನ್ನು ನೀಡುತ್ತಾರೆ. ಇಂತಹ ಸಮಾಜ ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಾಗೂ ರಾಜಕೀಯವಾಗಿ ಅಭಿವೃದ್ಧಿ ಹೊಂದಬೇಕಾಗಿದೆ. ಸಮಾಜದಲ್ಲಿ ತಾಂತ್ರಿಕವಾಗಿ ಆವಿಷ್ಕಾರಗಳು ನಡೆಯುತ್ತಿದ್ದರೂ ವಿಶ್ವಕರ್ಮ ಸಮಾಜದವರು ಶಿಲೆಗೆ ನೀಡುವಂತಹ ರೂಪಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದರು.

ಕರಕುಶಲಕ್ಕೆ ಹೆಚ್ಚಿನ ಮಹತ್ವ ಕೊಟ್ಟು ಕಲೆ ಉಳಿಸುವ ಮೂಲಕ ವಿಶ್ವಕರ್ಮ ಸಮಾಜವು ನಾಡಿಗೆ ಕೊಡುಗೆ ನೀಡಿದೆ. ಕಲೆಯನ್ನೇ ಉಸಿರಾಗಿಸಿಕೊಂಡಿರುವ ವಿಶ್ವಕರ್ಮ ಸಮುದಾಯದವರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಸಮಾಜದ ಮುಖ್ಯವಾಹಿನಿಗೆ ಬರಬೇಕು. ವಿಶ್ವಕರ್ಮ ಸಮುದಾಯಕ್ಕೆ ರಾಜಕೀಯ, ಸಾಮಾಜಿಕ ಹಾಗೂ ಶೈಕ್ಷಣಿಕ ಶಕ್ತಿ ತುಂಬುವ ನಿಟ್ಟಿನಲ್ಲಿ ಲಕ್ಷದೀಪೋತ್ಸವದಂತಹ ಧಾರ್ಮಿಕ ಸಭೆಗಳು ಮೇಲಿಂದ ಮೇಲೆ ನಡೆದಾಗ ಸಮಾಜ ಒಗ್ಗೂಡಲು ಸಾಧ್ಯವಾಗುತ್ತದೆ ಎಂದರು.

ಶಾಡಲಗೇರಿ ಏಕದಂಡಗಿಮಠದ ತೀರ್ಥೇಂದ್ರ ಸ್ವಾಮೀಜಿ, ನವಲಗುಂದ ಅಜಾತನಾಗಲಿಂಸ್ವಾಮಿ ಮಠದ ವೀರೇಂದ್ರ ಸ್ವಾಮೀಜಿ, ಮುರನಾಳದ ನಾಗಲಿಂಗ ಸ್ವಾಮೀಜಿ, ಇಳಕಲ್ಲ ವಿಶ್ವನಾಥ ಸ್ವಾಮೀಜಿ ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ, ಲಕ್ಷ್ಮೇಶ್ವರ ತಹಸೀಲ್ದಾರ ವಾಸುದೇವ ಸ್ವಾಮಿ, ಮುಖಂಡ ಮುತ್ತಣ್ಣ ಕಡಗದ ಮಾತನಾಡಿದರು.

ನಾರಾಯಣ ವಡ್ಡಟ್ಟಿ ಅಧ್ಯಕ್ಷತೆ ವಹಿಸಿದ್ದರು. ಪ.ಪಂ ಸದಸ್ಯರಾದ ಮಲ್ಲಿಕಾರ್ಜುನಗೌಡ ಭೂಮನಗೌಡ್ರ, ಶ್ರೀಶೈಲಪ್ಪ ಬಂಡಿಹಾಳ, ಸುಮಿತ್ರಾ ಕಮಲಾಪೂರ, ವಿಶಾಲಾಕ್ಷಿ ಹೊಸಮನಿ, ಮಂಜುಳಾ ಹುರಳಿ, ಜ್ಯೋತಿ ಪಾಯಪ್ಪಗೌಡ್ರ, ಗಣ್ಯ ವರ್ತಕ ಶರಣಪ್ಪ ಹಂಜಿ, ರವೀಂದ್ರನಾಥ ದೊಡ್ಡಮೇಟಿ ಸೇರಿದಂತೆ ಇತರರಿದ್ದರು.

> ಶಿರೋಳ ಯಚ್ಚರಸ್ವಾಮಿ ಮಠದ ಅಭಿನವ ಯಚ್ಚರ ಸ್ವಾಮೀಜಿ ಮಾತನಾಡಿ, ಪಂಚ ಲೋಹಗಳನ್ನು ಬಳಸಿ ಬಗೆಬಗೆಯ ಸಾಧನ-ಸಲಕರಣೆಗಳು, ಮೂರ್ತಿಗಳನ್ನು ಸಿದ್ಧಪಡಿಸುವ ಕರಕುಶಲತೆ ಹೊಂದಿರುವ ವಿಶ್ವಕರ್ಮ ಸಮುದಾಯದವರ ಕೈಯಲ್ಲಿ ಕಲ್ಲುಗಳು ಕೂಡ ಶಿಲೆಯಾಗಿ ಅರಳುತ್ತವೆ. ಜಾತಿ, ಧರ್ಮದ ತಾರತಮ್ಯವಿಲ್ಲದೆ ಎಲ್ಲ ಜನಾಂಗದವರನ್ನು ಸಮಾನವಾಗಿ ಕಂಡ ವಿಶ್ವಕರ್ಮ

---

# ಸರ್ವಜ್ಞರ ವಚನಗಳು ಸಮಾಜಕ್ಕೆ ದಾರಿದೀಪ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸರ್ವಜ್ಞರ ವಚನಗಳು ಜೀವನದ ಅನುಭವಗಳನ್ನು ಒಳಗೊಂಡಿವೆ. ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಯತ್ನ ವಚನಗಳ ಮೂಲಕ ನಡೆದಿದೆ. ಅವರ ಆದರ್ಶಗಳನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ಹೇಳಿದರು.

ಇಲ್ಲಿನ ಪಟ್ಟಣ ಪಂಚಾಯಿತಿಯಲ್ಲಿ ಆಚರಿಸಲಾದ ಸಂತ ಕವಿ ಸರ್ವಜ್ಞರ ಜಯಂತಿ ನಿಮಿತ್ತ ಸರ್ವಜ್ಞ ಅವರ



ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಸಾರ್ವಕಾಲಿಕ ಸತ್ಯವನ್ನು ಪ್ರತಿಪಾದಿಸಿದ ಕವಿ ಸರ್ವಜ್ಞನ ವಚನಗಳು ಇಂದಿನ ಮಕ್ಕಳು, ಯುವಜನಾಂಗ ಹಾಗೂ ಸಮಾಜಕ್ಕೆ ದಾರಿದೀಪವಾಗಿವೆ. ಕವಿ ಸರ್ವಜ್ಞನ ವಚನಗಳು ಸಮಾಜ ಸುಧಾರಣೆಯ, ಜಾತ್ಯಾತೀತ, ಮಾನವೀಯ ಮೌಲ್ಯ ಹಾಗೂ ಸರ್ವಕಾಲಿಕ ಸತ್ಯವನ್ನು ಪ್ರತಿಪಾದಿಸುವಂತಹ ವಚನಗಳಾಗಿವೆ. ಸರಳ, ಸಜ್ಜನಿಕೆ ಹಾಗೂ ಆದರ್ಶ ಗುಣಗಳನ್ನು ಹೊಂದಿದ್ದ ಸರ್ವಜ್ಞ ಸುಂದರ ಹಾಗೂ ಆದರ್ಶ ಸಮಾಜ ನಿರ್ಮಿಸಲು ನಿರಂತರವಾಗಿ ಶ್ರಮಿಸಿದ್ದಾರೆ ಎಂದರು.

ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿ, ಕವಿ ಸರ್ವಜ್ಞ ಸೌಜನ್ಯಶೀಲ, ವಿಧೇಯಕ, ಗೌರವಯುತವಾಗಿ ಬಾಳಿ ಬದುಕಿ ಸಮಾಜ ತಿದ್ದುವ ಕೆಲಸ ಮಾಡಿದ್ದಾರೆ. ಹಳ್ಳಿ, ಜಾನಪದ ಭಾಷಾ ಶೈಲಿಯಲ್ಲಿ ಸಾಮಾನ್ಯ ಜನರಿಗೆ ಮನವರಿಕೆಯಾಗುವಂತಹ ವಚನಗಳನ್ನು ರಚಿಸಿದರು ಎಂದರು.

ಪ.ಪಂ ಸ್ಥಾಯಿ ಕಮಿಟಿ ಚೇರಮನ್ ಮುತ್ತಪ್ಪ ನೂಲ್ಕಿ, ಸದಸ್ಯರಾದ ದಾವುದಲಿ ಕುದರಿ, ರಾಚಯ್ಯ ಮಾಲಗಿತ್ತಿಮಠ, ಶ್ರೀಶೈಲಪ್ಪ ಬಂಡಿಹಾಳ, ಜ್ಯೋತಿ ಪಾಯಪ್ಪಗೌಡ್ರ, ಮಂಜುಳಾ ಹುರಳಿ, ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಸಿಬ್ಬಂದಿ ನೀಲಪ್ಪ ಚಳ್ಳಮರದ, ಮಹಾದೇವಪ್ಪ ಮ್ಯಾಗೇರಿ, ಬಸವರಾಜ ಮಾಳವಾಡ, ಶೇಖಪ್ಪ ಹೊನ್ನವಾಡ, ಶ್ರೀಕಾಂತ ಪಲ್ಲೇದ ಸೇರಿದಂತೆ ಇತರರಿದ್ದರು.

---

**ಬೆಳಧಡಿ ಸ್ವಯಂ ಉದ್ಭವ ಶ್ರೀ ಬಯಲು ಬಸವೇಶ್ವರ ದೇವಸ್ಥಾನದಲ್ಲಿ ಹಲವು ಕಾರ್ಯಕ್ರಮ**

# ಪ್ರಥಮ ವರ್ಷದ ಜಾತ್ರಾ ಮಹೋತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಸುಕ್ಷೇತ್ರ ಬೆಳಧಡಿ ಗ್ರಾಮದ ಸ್ವಯಂ ಉದ್ಭವ ಶ್ರೀ ಬಯಲು ಬಸವೇಶ್ವರ ದೇವಸ್ಥಾನದ ನೂತನ ತೇರು ಹಾಗ ಪ್ರಥಮ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಫೆ. 20ರ ಬೆಳಿಗ್ಗೆ 6 ಗಂಟೆಗೆ ನೂತನ ರಥದ ಆಗಮನದ ಪೂಜೆ, ಕುಂಭ ಮೇಳ ಸಕಲ ವಾದ್ಯದೊಂದಿಗೆ ಜರುಗಿ-ತು. ಉದ್ಭವ ಶ್ರೀ ಬಯಲು ಬಸವೇಶ್ವರ ಮೂರ್ತಿಗೆ ಮಹಾರುದ್ರಾಭಿಷೇಕ, ನೂತನ ರಥ ಗ್ರಾಮ ಪ್ರವೇಶ ಮಣಕವಾಡದ ಮ.ನಿ.ಪ್ರ. ಮೃತ್ಯುಂಜಯ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಜರುಗಿತು.

ಫೆ.20ರಿಂದ 27ರವರೆಗೆ ಸಾಯಂಕಾಲ 7ರಿಂದ 8 ಗಂಟೆವರೆಗೆ ಪರಮಪೂಜ್ಯ ಶ್ರೀ ಬಸವ ಸಮರ್ಥ ಜ್ಞಾನ ಯೋಗಾಶ್ರಮ ಶಿರುಂಜ ಇವರಿಂದ ಆಧ್ಯಾತ್ಮಿಕ ಪ್ರವಚನ ಜರುಗುತ್ತಿದೆ. ಫೆ. 26ರ ಬೆಳಿಗ್ಗೆ 6ರಿಂದ ಫೆ.27ರ ಬೆಳಿಗ್ಗೆ 6 ಗಂಟೆಯವರೆಗೆ ಜಾಗರಣೆ ಜರುಗುವುದು. ಫೆ.27ರಂದು ಬೆಳಿಗ್ಗೆ 6 ಗಂಟೆಗೆ ಪರಮಪೂಜ್ಯ ಕಲ್ಲಯ್ಯಜ್ಜನವರಿಂದ ತೇರಿಗೆ ಮಂಗಳ ದ್ರವ್ಯಗಳ ಅರ್ಪಣೆ, ಬೆಳಿಗ್ಗೆ 9 ಗಂಟೆಗೆ ಶ್ರೀಗಳಿಂದ ಆಶೀರ್ವಚನ ಹಾಗೂ




ಸದ್ಭಕ್ತರಿಂದ ಮಹಾಪ್ರಸಾದ ಜರುಗುವುದು. ಸಾಯಂಕಲ 6 ಗಂಟೆಗೆ ಆಶೀರ್ವಚನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶ್ರೀ ಮ.ನಿ.ಪ್ರ. ಜಗದ್ಗುರು ನಾಡೋಜ ಡಾ. ಅನ್ನದಾನೇಶ್ವರ ಮಹಾಶಿವಯೋಗಿಳವರು ವಹಿಸುವರು.

ಫೆ. 28ರ ಮುಂಜಾನೆ 6 ಗಂಟೆಗೆ ಶ್ರೀ ಬಯಲು ಆಂಜನೇಯ ಬಸವೇಶ್ವರ ದೇವರಿಗೆ ಮಹಾರುದ್ರಾಭಿಷೇಕ, ಹೋಮ, ಹವನ, ಕಳಸಾರೋಹಣ ಜರುಗುವುದು. ಸಾಯಂಕಾಲ 5-58ರ ಅಮೃತ ಘಳಿಗೆಯಲ್ಲಿ ಮಹಾರಥೋತ್ಸವ ಜರುಗುವುದು. ಫೆ.28ರ ಬೆಳಿಗ್ಗೆ 10 ಗಂಟೆಗೆ ಧರ್ಮಸಭೆಯ ದಿವ್ಯ ಸಾನ್ನಿಧ್ಯವನ್ನು 13ನೇ ಪಟ್ಟಾಧ್ಯಕ್ಷರಾದ ಸರ್ವಧರ್ಮ ಸಮನ್ವಯದ ಭಾವೈಕ್ಯತಾ ಪೀಠಾಧ್ಯಕ್ಷರಾದ ಶ್ರೀ ಮನ್ಮಹಾರಾಜ ನಿರಂಜನ ಶ್ರೀ ಜಗದ್ಗುರು ಫಕೀರ ಸಿದ್ಧರಾಮ ಮಹಾಸ್ವಾಮಿಗಳು ಶ್ರೀ ಜಗದ್ಗುರು ಫಕೀರೇಶ್ವರ ಸಂಸ್ಥಾನಮಠ ಸುಕ್ಷೇತ್ರ ಶಿರಹಟ್ಟಿ, ಸಮ್ಮುಖವನ್ನು ಪರಮಪೂಜ್ಯ ಶ್ರೀ ದತ್ತಾವಧೂತರು ಶ್ರೀ ಚೈತನ್ಯ ಆಶ್ರಮ ಹುಬ್ಬಳ್ಳಿ, ದಿವ್ಯ ಉಪಸ್ಥಿತಿ ಶ್ರೀ ಮ.ನಿ.ಪ್ರ. ಸ್ವ ಚಿದಾನಂದ ಮಹಾಸ್ವಾಮಿಗಳು ಕಪ್ಪತ್ತಮಠ ಹಿರೇಸಿಂದೋಗಿ, ಶ್ರೀ ಮ.ನಿ.ಪ್ರ. ಸ್ವ. ಅಭಿನವ ಬೂದೀಶ್ವರ ಮಹಾಸ್ವಾಮಿಗಳು, ಶ್ರೀ ವೇ.ಮೂ. ಶಂಭುಲಿಂಗಯ್ಯ ವೀರಭದ್ರಯ್ಯ ಕಲ್ಮಠ ಗುರುಗಳು ಉಪಸ್ಥಿತರಿರುವರು.

ಮುಖ್ಯ ಅತಿಥಿಗಳಾಗಿ ಸಚಿವ ಎಚ್.ಕೆ. ಪಾಟೀಲ, ಸಂಸದ ಬಸವರಾಜ ಬೊಮ್ಮಾಯಿ ಆಗಮಿಸುವರು.

ವೆಂಕಟೇಶ್ವರ ಪ್ರೌಢಶಾಲೆ ಬೆಳಧಡಿ ವಿದ್ಯಾರ್ಥಿಗಳಿಂದ ಫೆ.20ರಿಂದ 27ರವರೆಗೆ ಪ್ರತಿದಿನ ಸಾಯಂಕಲ 6ರಿಂದ 7 ಗಂಟೆವರೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವವು.

ಫೆ.28ರ ರಾತ್ರಿ 10-30ಕ್ಕೆ ಸತ್ಯದ ದೀಪ ಹಚ್ಚಿದ ಬಡವ ಅರ್ಥಾತ್ ಧರ್ಮದ ಮನೆಯಲ್ಲೊಂದು ಕರ್ಮದ ಕಾಂಡ ನಾಟಕ ಪ್ರದರ್ಶನ ಜರಗುವುದು.

> ಮಾರ್ಚ್ 1ರ ಸಾಯಂಕಾಲ 5 ಗಂಟೆಗೆ ಕಡುಬಿನ ಕಾಳಗ ಜರುಗುವುದು. ಈ ಜಾತ್ರಾ ಮಹೋತ್ಸವದ ಎಲ್ಲ ಕಾರ್ಯಕ್ರಮಗಳಿಗೆ ಬೆಳಧಡಿ, ಬ್ರಹ್ಮಾನಂದಪುರ, ಕಬಲಾಯತಕಟ್ಟಿ, ನಭಾಪೂರ ಹಾಗೂ ಸುತ್ತಮುತ್ತಲಿನ ಗ್ರಾಮದ ಗ್ರಾಮಸ್ಥರು, ಗ್ರಾ.ಪಂ ಸರ್ವ ಸದಸ್ಯರು ಹಾಗೂ ಊರಿನ ಗುರುಹಿರಿಯರು ಪತ್ರಿಕಾ ಪ್ರಕಟಣೆಯ ಮೂಲಕ ಸ್ವಾಗತ ಕೋರಿದ್ದಾರೆ.


## ಎಂಇಎಸ್ ಪುಂಡರನ್ನು ಗಡಿಪಾರು ಮಾಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಅವಿಭಾಜ್ಯ ಅಂಗವಾಗಿರುವ ವೀರಮಾತೆ ಕಿತ್ತೂರಾಣಿ ಚನ್ನಮ್ಮ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ, ಬೆಳದಡಿ ಮಲ್ಲಮ್ಮ ಜನಿಸಿರುವ ಜಿಲ್ಲೆ ಬೆಳಗಾವಿಯಲ್ಲಿ ಪದೇಪದೇ ಕನ್ನಡಿಗರ ಮೇಲೆ ದಬ್ಬಾಳಿಕೆಯನ್ನು ಮಾಡುತ್ತಿರುವ ಕನ್ನಡ ವಿರೋಧಿ ಮರಾಠಿಗರು ಮತ್ತು ಎಂಇಎಸ್ ಪುಂಡರನ್ನು ಈ ಕೂಡಲೇ ಕರ್ನಾಟಕ ರಾಜ್ಯ ಸರ್ಕಾರ ಅಂತಹ ಕನ್ನಡ ವಿರೋಧಿಗಳನ್ನು ಕರ್ನಾಟಕದಿಂದ ಗಡಿಪಾರು ಮಾಡಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಗೌರವಾಧ್ಯಕ್ಷ ನಿಂಗನಗೌಡ ಎಸ್.ಮಾಲಿಪಾಟೀಲ್ ಆಗ್ರಹಿಸಿದ್ದಾರೆ.

## ಮರಾಠಿ ಪುಂಡರನ್ನು ಬಂಧಿಸಿ




■ ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿಯ ಬಾಳೇಕುಂದ್ರಿ ಬಸ್‌ನಲ್ಲಿ ನಿರ್ವಾಹಕರು ಕನ್ನಡದಲ್ಲಿ ಮಾತನಾಡಿದರು ಎಂಬ ಕಾರಣಕ್ಕೆ ನಿರ್ವಾಹಕನ ಮೇಲೆ ಹಲ್ಲೆ ನಡೆಸಿರುವುದನ್ನು ಕರ್ನಾಟಕ ರಕ್ಷಣಾ ವೇದಿಕೆಯ ಪ್ರವೀಣಶೆಟ್ಟಿ ಬಣ ತೀವ್ರವಾಗಿ ಖಂಡಿಸಿದೆ. ಹಲ್ಲೆ ಮಾಡಿದ ಮರಾಠಿ ಪುಂಡರನ್ನು ಬಂಧಿಸಿ ಪ್ರಕರಣ ದಾಖಲಿಸಿಕೊಂಡು ಕಾನೂನು ಪ್ರಕಾರ ತಪ್ಪಿತಸ್ಥರನ್ನು ಗುರುತಿಸಿ ಕ್ರಮ ಕೈಗೊಳ್ಳಬೇಕು. ಇಲ್ಲದೆ ಹೋದಲ್ಲಿ ಎಲ್ಲ ಕನ್ನಡ ಪರ ಸಂಘಟನೆಗಳೊಂದಿಗೆ ತೀವ್ರವಾದ ಹೋರಾಟ ನಡೆಸಲಾಗುವುದು ಎಂದು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣಶೆಟ್ಟಿ ಬಣದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ವೆಂಕಟೇಶ ಆರ್.ಬೇಲೂರ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

### ಸಂತ ಶ್ರೀ ಸೇವಾಲಾಲ್ ಮಹಾರಾಜರ ಜಯಂತ್ಯುತ್ಸವದಲ್ಲಿ ಶಾಸಕ ಡಾ: ಚಂದ್ರು ಲಮಾಣಿ

# ಸಮಾಜವನ್ನು ಒಗ್ಗೂಡಿಸಿಕೊಂಡು ಹೋಗುತ್ತೇನೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನಲ್ಲಿ ಸರಕಾರಿ ಸೇವೆಗೆ ಬಂದ ನನ್ನನ್ನು ಜನತೆ ಇದೀಗ ಶಾಸಕನನ್ನಾಗಿ ಆಯ್ಕೆ ಮಾಡಿದ್ದಾರೆ. ಹೀಗಾಗಿ ಎಲ್ಲ ಸಮಾಜದವರನ್ನೂ ಗೌರವಯುತವಾಗಿ ಕಾಣುವುದಾಗಿ ಇದೇ ವೇದಿಕೆ ವತಿಯಿಂದ ಪ್ರಮಾಣ ಮಾಡಿ ಹೇಳುತ್ತೇನೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಶಿರಹಟ್ಟಿಯ ಶ್ರೀ ಜ.ಫಕೀರೇಶ್ವರ ಮಠದ ಆವರಣದಲ್ಲಿ ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕಾ ಲಂಬಾಣಿ ಬಂಜಾರ ಸಮಾಜದ ಸಂಯುಕ್ತ ಆಶ್ರಯದಲ್ಲಿ ಜರುಗಿದ ಸಂತ ಶ್ರೀ ಸೇವಾಲಾಲ್ ಮಹಾರಾಜರ 286ನೇ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಾನು ಚುನಾವಣೆ ಪೂರ್ವ ನಾಮಿನೇಶನ್ ಮಾಡುವ ಸಂದರ್ಭದಲ್ಲಿ ಇಂತಹ ಜನಸ್ತೋಮ ಕಂಡಿದ್ದೆ. ತದನಂತರ ಇಂದು ಸಹ ಅಷ್ಟೇ ಪ್ರಮಾಣದಲ್ಲಿ ಸಮಾಜದ ಜನತೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಕಾರ್ಯಕ್ರಮ ಯಶಸ್ವಿಗೊಳಿಸಿದ್ದಾರೆ. ಸಮಾಜವನ್ನು ಒಗ್ಗೂಡಿಸಿಕೊಂಡು ಹೋಗುವುದು ನನ್ನ ಕರ್ತವ್ಯವಾಗಿದೆ. ಆದರಳ್ಳಿಯ ಕುಮಾರ ಮಹಾರಾಜರು ಆಡಿಯೋ ಕ್ಲಿಪ್‌ನಲ್ಲಿ ಹೇಳಿದ್ದು ನೋವಿನ ವಿಷಯ. ಅಲ್ಲಿಯ ಜನತೆಗೆ ಬೆದರಿಕೆ




ಹಾಕಿದ್ದನ್ನು ಸಮಾಜ ಸಹಿಸದು. ಸಮಾಜದಿಂದ ನಾವು, ನಮ್ಮಿಂದ ಸಮಾಜವಲ್ಲ ಎಂದರು.

ಇದಕ್ಕೂ ಮೊದಲು ಬೆಳಿಗ್ಗೆ 11 ಗಂಟೆ ಸುಮಾರಿಗೆ ತಹಸೀಲ್ದಾರ ಕಚೇರಿಯಿಂದ ಸಂತ ಶ್ರೀ ಸೇವಾಲಾಲರ ಭವ್ಯ ಭಾವಚಿತ್ರದ ಮೆರವಣಿಗೆಯು ಪ್ರಾರಂಭವಾಗಿ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶ್ರೀಮಠ ತಲುಪಿತು. ಈ ಸಂದರ್ಭದಲ್ಲಿ ಮಾಜಿ ಶಾಸಕ ರಾಮಣ್ಣ ಲಮಾಣಿ ಹಾಗೂ ಬಿಗ್‌ಬಾಸ್ ವಿನ್ನರ್ ಹನಮಂತ ಲಮಾಣಿ, ಸರಿಗಮಪ ರನ್ನರ್ ಅಪ್ ರಮೇಶ ಲಮಾಣಿ ಕೂಡಾ ಪ್ರಮುಖ ಆಕರ್ಷಣೆಯಾಗಿದ್ದರು. ನಂತರ ಇಬ್ಬರು ಗಾಯಕರು ನೆರೆದ ಜನಸ್ತೋಮಕ್ಕೆ ಕೈ ಮುಗಿಯುತ್ತಾ, ಕೈ ಕುಲುಕುತ್ತಾ ಸಾಗಿದರು. ಈ ಸಂದರ್ಭದಲ್ಲಿ ಸಮಾಜದ ಯುವಕರು-ಯುವತಿಯರು ಡಿಜೆ ಸದ್ದಿಗೆ ತಮ್ಮ ಹೆಜ್ಜೆ ಹಾಕಿದರು.

ಸಾನ್ನಿಧ್ಯವನ್ನು ಲಿಂಗಸೂರು ಛಾವಣಿಯ ವಿಜಯ ಮಹಾಂತೇಶ್ವರಮಠದ ಜ.ಸಿದ್ದಲಿಂಗ ಶ್ರೀ ವಹಿಸಿದ್ದರು. ಮಾಜಿ ಶಾಸಕ ರಾಮಣ್ಣ ಲಮಾಣಿ, ಸಮಾಜದ ತಾಲೂಕಾಧ್ಯಕ್ಷ ಶಿವಣ್ಣ ಲಮಾಣಿ, ದೀಪಕ ಲಮಾಣಿ, ದೇವಪ್ಪ ಲಮಾಣಿ, ಜಾನು ಲಮಾಣಿ, ಸುನೀಲ ಮಹಾಂತಶೆಟ್ಟರ, ಆನಂದ ಗಡ್ಡದ್ದೇವರಮಠ, ನಾಗರಾಜ ಲಕ್ಕುಂಡಿ, ಮಂಜುನಾಥ ಘಂಟಿ, ಗುರಪ್ಪ ಲಮಾಣಿ, ರಾಮಣ್ಣ ಶಿಗ್ಲಿ, ಬಿಇಓ ಎಚ್.ಎನ್.ನಾಯಕ, ಪಿಎಸ್‌ಐ ಚನ್ನಯ್ಯ ದೇವೂರ, ವೆಂಕಟೇಶ ಅರ್ಕಸಾಲಿ, ಎಂ.ಕೆ. ಲಮಾಣಿ, ಲಕ್ಷ್ಮಣ ಲಮಾಣಿ, ಪರಮೇಶ ಲಮಾಣಿ, ಟೋಪಣ್ಣ ಲಮಾಣಿ, ಥಾವರೆಪ್ಪ ಲಮಾಣಿ, ಪುಂಡಲೀಕ ಲಮಾಣಿ, ಸೋಮಣ್ಣ ಲಮಾಣಿ, ಈರಣ್ಣ ಚವ್ಹಾಣ, ಸೋಮರಡ್ಡಿ ಲಮಾಣಿ, ಶಿವು ಲಮಾಣಿ, ಕುಬೇರ ಲಮಾಣಿ, ಗಣೇಶ ನಾಯ್ಕ, ಸಂತೋಷ ರಾಠೋಡ ಮುಂತಾದವರು ಉಪಸ್ಥಿತರಿದ್ದರು.

ಯಾರೇ ಆದರೂ ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳನ್ನು ಒಡೆಯಲು ಸಾಧ್ಯವಿಲ್ಲ. ನನ್ನ ಸಮಾಜ ತಲೆ ತಗ್ಗಿಸುವ ಕೆಲಸ ನಾನು ಮಾಡುವುದಿಲ್ಲ. ಎಲ್ಲ ಸಮಾಜಗಳ ಗೌವ ಉಳಿಸುವ ಕೆಲಸ ಮಾಡುತ್ತೇನೆ. ನಿಮ್ಮ ಋಣ ತೀರಸಲು ಸಾಧ್ಯವಿಲ್ಲ. ಇತ್ತೀಚೆಗೆ ಸಮಾಜದ 10 ಪ್ರತಿಭಾವಂತ ವಿದ್ಯಾರ್ಥಿಗಳು ಎಂಬಿಬಿಎಸ್‌ಗೆ ಆಯ್ಕೆಯಾಗಿದ್ದಾರೆ. ವಿಶೇಷವಾಗಿ ಹರದಗಟ್ಟಿಯ ತಾಂಡಾದ ವಿದ್ಯಾರ್ಥಿನಿಯೊಬ್ಬಳು ತಂದೆ-ತಾಯಿ ಇಲ್ಲದಿದ್ದರೂ ಅಜ್ಜಿಯ ಆಶ್ರಯದಲ್ಲಿ ವಿದ್ಯಾಭ್ಯಾಸ ಮಾಡಿದ್ದು ಸಮಾಜದ ಗೌರವ ಹೆಚ್ಚಿಸಿದ್ದಾಳೆ. ಜೊತೆಗೆ 44 ಜನ ಸರಕಾರಿ ಸೇವೆ ಸೇರಿದ್ದಾರೆ. ಇದು ಹೆಮ್ಮೆಯ ವಿಷಯ ಎಂದು ಡಾ.ಚಂದ್ರು ಲಮಾಣಿ ಹೇಳಿದರು.

# ಕಲಿಕಾ ಹಬ್ಬದಿಂದ ಪ್ರತಿಭೆಗಳ ಅನಾವರಣ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳ ಕಲಿಕಾ ಹಬ್ಬವು ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿದೆ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಸಮೀಪದ ಶ್ಯಾಗೋಟಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಚಿಕ್ಕಹಂದಿಗೋಳ ಕ್ಲಸ್ಟರ್ ಮಟ್ಟದ ಎಫ್.ಎಲ್.ಎನ್ ಕಲಿಕಾ ಹಬ್ಬವನ್ನು ಉದ್ಘಾಟಿಸಿ ಮಾತನಾಡಿ, ಮಕ್ಕಳಲ್ಲಿ ಸಾಕಷ್ಟು ಪ್ರತಿಭೆಗಳಿರುವುದನ್ನು ಗುರುತಿಸಿ ಅವುಗಳನ್ನು ಹೊರಹಾಕಲು ಇಂತಹ ವೇದಿಕೆಗಳು ಸಹಕಾರಿಯಾಗುತ್ತವೆ. ಶಿಕ್ಷಕರು, ಪಾಲಕರು ಮಕ್ಕಳ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕ ಮಕ್ಕಳ ಭವಿಷ್ಯಕ್ಕೆ ಬುನಾದಿಯಾಗಬೇಕಾಗಿದೆ ಎಂದರು.

ಅಧ್ಯಕ್ಷತೆಯನ್ನು ಶೋಭಾ ನೀಲಪ್ಪಗೌಡ್ರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ವಿ.ಎಂ. ಹಿರೇಮಠ, ಗ್ರಾ.ಪಂ ಅಧ್ಯಕ್ಷೆ ನಿವೇದಿತಾ ಹಿರೇಮಠ, ಸದಸ್ಯ ಎಸ್.ಜಿ. ವೆಂಕನಗೌಡ್ರ, ಕೊಟ್ರೇಶ ಕೆ, ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಎಸ್. ಆರ್. ಬಂಡಿ, ಅಕ್ಷರ ದಾಸೋಹ ಅಧಿಕಾರಿ ಶಂಕರ ಹಡಗಲಿ, ರಾಮಣ್ಣಾ ಕುರ್ತಕೋಟಿ, ಪ್ರೇಮಾ ಅಣ್ಣಿಗೇರಿ, ಮಂಜುನಾಥ ಕೊರ್ಲಹಳ್ಳಿ, ಗುರುನಾಥ ಗುಡಗೇರಿ, ಬಸಪ್ಪ ಅಣ್ಣಿಗೇರಿ, ರಾಮಣ್ಣಾ ಕಿರಬಣ್ಣವರ, ರಾಜು ಕುರಿ, ಸಿಆರ್‌ಪಿ ಡಿ.ಸಿ. ನದಾಫ್, ಶಾಲಾ ಪ್ರಧಾನ ಗುರು ಬಿ.ಎಸ್. ಹುಲ್ಯಾಳ ಪಾಲ್ಗೊಂಡಿದ್ದರು.

# ವಕ್ಫ್ ಮಸೂದೆ ತಿರಸ್ಕರಿಸುವಂತೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಕ್ಫ್ ಮಸೂದೆ-2024ನ್ನು ತಿರಸ್ಕರಿಸುವಂತೆ ನರಗುಂದ ತಹಸೀಲ್ದಾರರಿಗೆ ಕರ್ನಾಟಕ ಮುಸ್ಲಿಂ ಯುನಿಟಿ ನರಗುಂದ ವತಿಯಿಂದ ಮನವಿ ಸಲ್ಲಿಸಲಾಯಿತು.

ಯುನಿಟಿಯ ತಾಲೂಕಾಧ್ಯಕ್ಷ ಆಯಾಜ್‌ಖಾನ್ ಪಠಾಣ ಮನವಿ ಸಲ್ಲಿಸಿ ಮಾತನಾಡಿ, ವಕ್ಫ್ ಮಸೂದೆ-2024ನ್ನು ನಾವು ಪ್ರಬಲವಾಗಿ ತಿರಸ್ಕರಿಸುತ್ತೇವೆ. ಈ ಮಸೂದೆ ನಮ್ಮ ಹಕ್ಕುಗಳ ಮೇಲೆ ನಿರ್ಬಂಧ ಹೇರಲು ಹಾಗೂ ನಮ್ಮ ಸಾಂವಿಧಾನಿಕ ಸ್ವಾತಂತ್ರ್ಯವನ್ನು ಕುಗ್ಗಿಸಲು ಮಾಡಲಾದ ಒಂದು ಅಪಾಯಕಾರಿ ಪ್ರಯತ್ನವಾಗಿದೆ. ಇದು ನ್ಯಾಯೋಚಿತವಲ್ಲ ಮತ್ತು ನಮ್ಮ ಸಮುದಾಯದ ಹಿತಾಸಕ್ತಿಗಳಿಗೆ



ವಿರುದ್ಧವಾಗಿದೆ.

ಈ ಮಸೂದೆ ಜಾರಿಗೆ ಬಂದಲ್ಲಿ ಪ್ರಜಾಪ್ರಭುತ್ವದ ತತ್ವಗಳಿಗೆ ಧಕ್ಕೆ ಬರುವ ಸಾಧ್ಯತೆ ಇದೆ. ಇದು ಜಾತ್ಯಾತೀತ ಮತ್ತು ಸರ್ವಧರ್ಮ ಸಮಭಾವನೆಯನ್ನು ನಾಶ ಮಾಡುವಂತಹ ಪ್ರಯತ್ನವಾಗಿದೆ. ತಕ್ಷಣವೇ ಈ ಮಸೂದೆಯನ್ನು ರದ್ದುಗೊಳಿಸಲು ಹಾಗೂ ಇದನ್ನು ಜಾರಿಗೆ ತರದಂತೆ ಸೂಕ್ತ ಕ್ರಮ ಕೈಗೊಳ್ಳಲು ಸರ್ಕಾರದ ಗಮನ ಸೆಳೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಫಾರೂಕ್ ಮಾಜಿದ್ ಮುನಿ, ಖಲಂದರ್ ಸಕಲಿ, ಭಾಷಾಸಾಬ್ ಗದಗ್, ಮಾಜಿದ್ ಮುಲ್ಲಾ, ರಫೀಕ್‌ಸಾಬ್ ಗಸ್ತಿ, ಗೌಸ್ ತಬ್ಬಲ್ಲಿ, ಮಕ್ತುಮಸಾಬ ರಾಜಖಾನ್, ಮಹಮ್ಮದ್ ಮದರ್ಖಂಡಿ, ಇಸ್ಮಾಯಲ್ ಖಲೀಫ್, ಸಮೀರ್ ಹುಣಸೀಮರದ, ರಿಯಾಜ್ ಸಕಲಿ ಹಜರತ್‌ಅಲಿ ಮುನ್ನಳ್ಳಿ, ದಾವೂದ್ ಖಾನ ಪಠಾಣ ಉಪಸ್ಥಿತರಿದ್ದರು.



ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳನ್ನು ಯುವ ಉದ್ದಿಮೆದಾರ ಸುನೀಲ ವೆರ್ಣೇಕರ್ ಅವರ ನಿವಾಸದಲ್ಲಿ ವೆರ್ಣೇಕರ್ ಕುಟುಂಬದ ವತಿಯಿಂದ ಗೌರವಿಸಲಾಯಿತು. ಈ ಸಂಧರ್ಭದಲ್ಲಿ ಡಾ. ಬಸವರಾಜ ಧಾರವಾಡ, ಎಸ್.ಎಂ. ಅಗಡಿ ಸೇರಿದಂತೆ ದೈವಜ್ಞ ಸಮಾಜದ ಗುರು-ಹಿರಿಯರು ಉಪಸ್ಥಿತರಿದ್ದರು.

## ನನ್ನ ಹೋರಾಟ ನಿರಂತರ, ನಾನು ಸುಮ್ಮನೆ ಕುಳಿತುಕೊಳ್ಳುವ ವ್ಯಕ್ತಿಯಲ್ಲ

■ ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ

ನನ್ನ ಹೋರಾಟ ನಿರಂತರ, ನಾನು ಸುಮ್ಮನೆ ಕುಳಿತುಕೊಳ್ಳುವ ವ್ಯಕ್ತಿಯಲ್ಲ ಎಂದು ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಹೇಳಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ಮಾತನಾಡಿದ ಅವರು, ನಾನು ರೈತನ ಮಗ, ನನ್ನ ಕೊನೆ ಉಸಿರು ಹೋಗುವವರೆಗೂ, ನನ್ನ ಶಕ್ತಿ ಇರುವವರೆಗೂ ಹೋರಾಟ ಮಾಡುತ್ತೇನೆ. ನಾನು ಸುಮ್ಮನೆ ಕುಳಿತುಕೊಳ್ಳುವ ವ್ಯಕ್ತಿಯಲ್ಲ. ನಾನು ಯಾರ ಬಗ್ಗೆಯೂ ಮಾತನಾಡಲ್ಲ ಎಂದಿದ್ದಾರೆ.

ಯಾವುದೇ ಪಕ್ಷ ಯಾವುದೇ ಜಾತಿ ನಾಯಕರು ಇದ್ರೂ ಲಘುವಾಗಿ ಮಾತನಾಡಿಲ್ಲ. ನನ್ನ ಉಸಿರು ಇರುವಾಗಲೇ ರಾಜ್ಯಕ್ಕೆ ಏನಾದ್ರೂ ಒಳ್ಳೆಯದು ಮಾಡಬೇಕು. ಕೆಂಪು ಕೋಟೆಯ ಮೇಲೆ ಒಂದು ಸಲ ಬಾವುಟ ಹಾರಿಸಿದ್ದೇನೆ ಅಂತ ಶ್ರೀಗಳು ಹೇಳ್ತಿದ್ರು. ನನ್ನ ಶಕ್ತಿ ಭೈರವೈಕ್ಯ ಡಾ. ಬಾಲಗಂಗಾಧರನಾಥ ಸ್ವಾಮೀಜಿ ಆಗಿದ್ರು ಎಂದಿದ್ದಾರೆ. ನನ್ನ ಜನರಿಗಾಗಿ ಪಾರ್ಲಿಮೆಂಟ್‌ನಲ್ಲಿ ಹೋರಾಟ ಮಾಡುವ ಶಕ್ತಿ ಕೊಡು ಎಂದು ಕುಲದೇವರು ಈಶ್ವರನಲ್ಲಿ ಪ್ರಾರ್ಥನೆ ಮಾಡುತ್ತೇನೆ ಎಂದಿದ್ದಾರೆ.

## ಮ್ಯಾಂಗೋ ಹೋಟೆಲ್ ಮೇಲೆ ಪೊಲೀಸರ ದಾಳಿ: 26 ಜನ ಅಂದರ್!

■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಅಂದರ್- ಬಾಹರ್ ಇಸ್ಪೀಟ್ ಜೂಜಾಟ ಆಡುತ್ತಿದ್ದ 26 ಜನರನ್ನು ಖಚಿತ ಮಾಹಿತಿ ಮೇರೆಗೆ ಪೊಲೀಸರು ಅರೆಸ್ಟ್ ಮಾಡಿರುವ ಘಟನೆ ದಾವಣಗೆರೆ ನಗರದ ಡೆಂಟಲ್ ಕಾಲೇಜು ರಸ್ತೆಯ ಮ್ಯಾಂಗೋ ಹೋಟೆಲ್ ನಲ್ಲಿ ಜರುಗಿದೆ.

ಹೋಟೆಲ್‌ನಲ್ಲಿ ಅಕ್ರಮವಾಗಿ ನಡೆಸಲಾಗುತ್ತಿದ್ದ ಅಂದರ್ ಬಾಹರ್ ಅಡ್ಡೆಯ ಮೇಲೆ ನಡೆದ ದಾಳಿಯಲ್ಲಿ 26 ಮಂದಿಯನ್ನು ವಶಕ್ಕೆ ಪಡೆದಿದ್ದು, ಅಡ್ಡೆಯಲ್ಲಿದ್ದ 24,86,500 ರೂ. ಹಣವನ್ನು ಜಪ್ತಿ ಮಾಡಿದ್ದಾರೆ. ಖಚಿತ ಮಾಹಿತಿ ಮೇರೆಗೆ ಎಸ್‌ಪಿ ಉಮಾ ಪ್ರಶಾಂತ್, ಹೆಚ್ಚುವರಿ ಎಸ್ಪಿ ವಿಜಯಕುಮಾರ್ ಎಂ ಸಂತೋಷ ಹಾಗೂ ಮಂಜುನಾಥ್ ಅವರ ಮಾರ್ಗದರ್ಶನದಲ್ಲಿ ಸಿಇಎನ್ ಅಪರಾಧ ಠಾಣೆಯ ಡಿವೈಎಸ್ಪಿ ಪದ್ಮಶ್ರೀ ಗುಂಜೀಕರ್ ನೇತೃತ್ವದಲ್ಲಿ ಪಿಎಸ್‌ಐ ಸುನೀಲ್ ತೇಲಿ ಹಾಗೂ ಸಿಬ್ಬಂದಿ ದಾಳಿ ಮಾಡಿದ್ದರು

ಆರೋಪಿತರ ವಿರುದ್ಧ ಸಿಇಎನ್ ಪೊಲೀಸ್ ಠಾಣೆಯಲ್ಲಿ ಕೆಪಿ ಆ್ಯಕ್ಟ್ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

### ಶ್ರೀ ಕುಮಾರೇಶ್ವರರ ಮಹಾರಥೋತ್ಸವದ ಧರ್ಮ ಸಭೆಯಲ್ಲಿ ಮುಪ್ಪಿನ ಬಸವಲಿಂಗ ಸ್ವಾಮೀಜಿ

# ವಚನ ಸಾಹಿತ್ಯ ಉಳಿಸುವಲ್ಲಿ ಕುಮಾರೇಶ್ವರರ ಪಾತ್ರ ಮಹತ್ವದ್ದು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

12ನೇ ಶತಮಾನದಲ್ಲಿ ರಚನೆಯಾದ ವಚನಗಳು ನಮ್ಮ ಜನರ ನಿರ್ಲಕ್ಷ್ಯತೆಯಿಂದ ಹಾಳಾಗಿ ಹೋಗುತ್ತಿದ್ದ ಸಮಯದಲ್ಲಿ, ಮನೆಮನೆಗೆ ತೆರಳಿ ಅವುಗಳನ್ನು ಸಂಗ್ರಹಿಸಿದ ಶ್ರೇಯಸ್ಸು ಹಾನಗಲ್ಲ ಗುರು ಕುಮಾರೇಶ್ವರರಿಗೆ ಸಲ್ಲುತ್ತದೆ. ವಚನ ಸಾಹಿತ್ಯ ಉಳಿಸುವಲ್ಲಿ ಕುಮಾರೇಶ್ವರರ ಪಾತ್ರ ಮಹತ್ವದ್ದಾಗಿದೆ ಎಂದು ಹಾಲಕೆರೆಯ ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು.

ಸಮೀಪದ ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದಲ್ಲಿ ನಡೆದ ಶ್ರೀ ಕುಮಾರೇಶ್ವರರ ಮಹಾರಥೋತ್ಸವದ ನಂತರ ನಡೆದ ಧರ್ಮ ಸಭೆಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ನಿಡಗುಂದಿಕೊಪ್ಪದ ಮಠ ಕೇವಲ ಆಧ್ಯಾತ್ಮಿಕ ಸದ್ಗತಿಯನ್ನು ಒದಗಿಸುವಷ್ಟೇ ಅಲ್ಲದೆ ಭವರೋಗವನ್ನು ಕಳೆಯುವ ಮಹತ್ವದ ಮಠವಾಗಿದೆ. ಈ ಹಿಂದಿನ ಪೀಠಾಧಿಪತಿಗಳಾಗಿದ್ದ ಚನ್ನಬಸವ ಮಹಾಸ್ವಾಮಿಗಳು, ಶಿವಬಸವ ಮಹಾಸ್ವಾಮಿಗಳು ಹೇಗೆ ಭಕ್ತರ ರೋಗ ಕಳೆಯುವ ಕಾಯಕವನ್ನು ಕೈಗೊಂಡರೋ ಈಗಿನ




ಶ್ರೀಗಳೂ ಸಹ ಅದೇ ಮಾರ್ಗದಲ್ಲಿ ಸಾಗಿದ್ದು, ಇಲ್ಲೊಂದು ಉತ್ತಮವಾದ ಆಯುರ್ವೇದ ಚಿಕಿತ್ಸಾ ಕೇಂದ್ರವನ್ನು ತೆರೆಯುವ ಸಂಕಲ್ಪ ಮಾಡಿದ್ದಾರೆ. ಈ ಸಂಕಲ್ಪ ಈಡೇರುವಂತೆ ಗುರುಗಳು ಆಶೀರ್ವದಿಸಲಿ ಎಂದು ಹಾರೈಸುವದಾಗಿ ಹೇಳಿದರು.

ಸಾನ್ನಿಧ್ಯ ವಹಿಸಿದ್ದ ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿ ಆಶೀರ್ವಚನ ನೀಡಿ, ನಮ್ಮ ಶ್ರೀಮಠದ ಸದ್ಭಕ್ತರು ಎಂದಿಗೂ ಯಾವ ಕೆಲಸಕ್ಕೂ ಹಿಂದೆ ಬಿದ್ದವರಲ್ಲ. ಈ ಸಾರೆ ನಾವು ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನ ನಡೆಸಬೇಕೆಂದು ಹೇಳಿದಾಗ ಬೇರೆ ಯಾರ ಕಡೆಗೂ ಯಾವುದಕ್ಕೂ ನೋಡದೆ ಎಲ್ಲವನ್ನೂ ಹೆಗಲ ಮೇಲೆ ಹೊತ್ತು ಯಶಸ್ವಿಗೊಳಿಸಿದ್ದಾರೆ. ಅದೇ ರೀತಿ ಈ ಜಾತ್ರೆಯನ್ನೂ ಸಹ ಅಚ್ಚುಕಟ್ಟಾಗಿ ನೆರವೇರಿಸಿದ ಕೀರ್ತಿ ನಮ್ಮ ಶ್ರೀಮಠದ ಭಕ್ತರಿಗೆ ಸಲ್ಲುತ್ತದೆ. ಆದ್ದರಿಂದ ಎಲ್ಲ ಸದ್ಭಕ್ತರೂ ನಮ್ಮ ಶ್ರೀಮಠದ ದೊಡ್ಡ ಸಂಪತ್ತಾಗಿದ್ದಾರೆ ಎಂದು ಶ್ರೀಗಳು ತಿಳಿಸಿದರು.

ಹಾಲಕೆರೆಯ ಶ್ರೀಮಠ ಹಾಗೂ ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರ ಮಠಗಳೆರಡೂ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಎರಡೂ ಮಠಗಳ ಮೇಲೆ ನಿಮ್ಮ ಶ್ರದ್ಧಾಭಕ್ತಿ ಒಂದೇ ರೀತಿಯಲ್ಲಿರಲಿ. ಇಲ್ಲಿ ಐದು ದಿನಗಳ ಕಾಲ ಅಭಿನವ ಅನ್ನದಾನ ಸ್ವಾಮಿಗಳ ಜೀವನ ದರ್ಶನವನ್ನು ಶ್ರೀಧರಗಡ್ಡೆಯ ಮರಿಕೊಟ್ಟೂರ ದೇವರು ಸುಂದರವಾಗಿ ಹೇಳಿದ್ದಾರೆ. ಈ ಸಂದರ್ಭದಲ್ಲಿ ಕೇಳಿರುವ ಅಂಶಗಳನ್ನು ಮನದಲ್ಲಿಟ್ಟುಕೊಂಡು ನೀವು ಜೀವನದಲ್ಲಿ ಹೆಚ್ಚಿನ ಅಭಿವೃದ್ಧಿಯನ್ನು ಹೊಂದಬೇಕೆಂದು ಶ್ರೀಗಳು ತಿಳಿಸಿದರು.

ವೇದಿಕೆಯ ಮೇಲೆ ಖೇಳಗಿ ಶ್ರೀಗಳು, ಶ್ರೀಧರಗಡ್ಡೆಯ ಮರಿಕೊಟ್ಟೂರು ದೇವರು, ಚಂದ್ರಶೇಖರ ದೇವರು, ಶರಣಪ್ಪ ಬೆಟಗೇರಿ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಸಂಗೀತ ಬಳಗದವರಿಂದ ಸಂಗೀತ ಸೇವೆ ನಡೆಯಿತು. ವಿದ್ಯಾರ್ಥಿಗಳಿಂದ ನಡೆದ ಅಕ್ಕಮಹಾದೇವಿ ರೂಪಕವು ಭಕ್ತರ ಮನ ಸೆಳೆಯಿತು. ಜೀವನಸಾಬ ಬೂದಿಹಾಳ ಬಿನ್ನಾಳ ನಗೆಹಬ್ಬ ಕಾರ್ಯಕ್ರಮ ನಡೆಸಿಕೊಟ್ಟರು. ಶಿಕ್ಷಕ ರುದ್ರಪ್ಪ ಬೆಲ್ಲದ ಸ್ವಾಗತಿಸಿ ನಿರೂಪಿಸಿದರು.

### ನೀಲಗುಂದದ ಗುದ್ನೇಶ್ವರ ಮಠದಲ್ಲಿ ಮಹಾಶಿವರಾತ್ರಿ ನಿಮಿತ್ತ ಜಾಗರಣೆ ಕಾರ್ಯಕ್ರಮ

# ಉಚಿತ ಆರೋಗ್ಯ ತಪಾಸಣಾ ಶಿಬಿರ ಫೆ.24ಕ್ಕೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ನೀಲಗುಂದ ಗ್ರಾಮದಲ್ಲಿ ಫೆ.24ರಿಂದ 26ರವರೆಗೆ ದಿವ್ಯ ಚೇತನ ಟ್ರಸ್ಟ್ ಜ್ಞಾನಗಿರಿ ಗುದ್ನೇಶ್ವರಮಠದ ಆವರಣದಲ್ಲಿ ಮಹಾಶಿವರಾತ್ರಿ ಕಾರ್ಯಕ್ರಮ ನೆರವೇರುವದು.

ಫೆ.24ರಂದು ಮುಂಜಾನೆ 10 ಗಂಟೆಗೆ ರಕ್ತದಾನ ಶಿಬಿರ ಹಾಗೂ ಗದಗ ಜಿಲ್ಲಾ ವೈದ್ಯಕೀಯ ಸಂಸ್ಥೆ ಮತ್ತು ಜಿಲ್ಲಾ ಆಸ್ಪತ್ರೆ ಇವರ ಸಹಯೋಗದಲ್ಲಿ ಸಾರ್ವಜನಿಕ ಉಚಿತ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮ ನಡೆಯಲಿದೆ.

ಸಾಯಂಕಾಲ 6.30ಕ್ಕೆ ದಿವ್ಯ ಚೇತನ ಪ್ರಾಥಮಿಕ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನೆರವೇರಲಿದ್ದು, ಸಾನ್ನಿಧ್ಯವನ್ನು ಶಲವಡಿ ವಿರಕ್ತಮಠದ ಗುರುಶಾಂತ ಸ್ವಾಮಿಗಳು ವಹಿಸಿಕೊಳ್ಳುವರು. ಮುಖ್ಯ ಅಥಿತಿಗಳಾಗಿ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೆ.ಎಚ್. ಪಾಟೀಲ, ಗದಗ ಬಿಜೆಪಿ ಜಿಲ್ಲಾಧ್ಯಕ್ಷ





ರಾಜು ಕುರಡಗಿ, ಗದಗ ಡಿ.ಡಿ.ಪಿ.ಆಯ್. ಆರ್. ಎಸ್. ಬುರಡಿ, ಗದಗ ಗ್ರಾಮೀಣ ಬಿಇಓ ವಿ.ವಿ. ನಡುವಿನಮನಿ, ಗದಗ ಚಿಕ್ಕಟ್ಟಿ ಶಾಲೆ ಸಂಸ್ಥಾಪಕ ಎಸ್.ವಾಯ್. ಚಿಕ್ಕಟ್ಟಿ, ನಾಗರಾಜ ಯಂಡಿಗೇರಿ, ಶರಣು ರಡ್ಡೇರ, ದಾನಿ ಮೇಡಮ್, ಗಿರೀಶ ಡಬಾಲಿ, ಬಸವರಾಜ ಪಲ್ಲೇದ, ಸಂಜಯ ನೀಲಗುಂದ ಇತರರು ಭಾಗವಹಿಸಲಿದ್ದಾರೆ.

ಫೆ.25ರಂದು ಸಾಯಂಕಾಲ 6.30ಕ್ಕೆ ಅನುಭಾವ ಗೋಷ್ಠಿ ಕಾರ್ಯಕ್ರಮ ನೆರವೇರಲಿದ್ದು, ಕಾರ್ಯಕ್ರಮದ ಸಾನ್ನಿಧ್ಯವನ್ನು ಮುಳಗುಂದ ಗವಿಮಠ ಧಾರವಾಡದ ಮುರುಘಾಮಠದ ಮಲ್ಲಿಕಾರ್ಜುನ ಸ್ವಾಮಿಗಳು ವಹಿಸುವರು. ವಿ.ಪ ಸದಸ್ಯ ಎಸ್.ವಿ. ಸಂಕನೂರ ಕಾರ್ಯಕ್ರಮ ಉದ್ಘಾಟಿಸುವರು. ಮಾಜಿ ಶಾಸಕ ಡಿ.ಆರ್. ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅಥಿತಿಗಳಾಗಿ ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆ ನಿರ್ದೇಶಕರಾದ ಡಾ. ಬಸವರಾಜ ಬೊಮ್ಮನಹಳ್ಳಿ, ಅಥಿತಿಗಳಾಗಿ ಗಣ್ಯರಾದ ಎಸ್.ಎಂ. ನೀಲಗುಂದ, ಮಲ್ಲಿಕಾರ್ಜುನ ಸುರಕೋಡ, ರಾಮಣ್ಣ ಕಮಾಜಿ, ಯಲ್ಲಪ್ಪ ಅದರಗುಂಚಿ, ಚನ್ನಬಸಪ್ಪ ಕತ್ತಿ, ಶಿವಪ್ಪ ಕೋಳಿವಾಡ ಭಾಗವಹಿಸಲಿದ್ದಾರೆ. ಶಶಿಕಲಾ ಪೂಜಾರ, ಬೊಂಬಾಟ್ ಬಸಣ್ಣ, ಲಲಿತಾ ಕುರಹಟ್ಟಿ ಇವರಿಗೆ ಸನ್ಮಾನ ನಡೆಯಲಿದೆ.

ಈ ಸಂದರ್ಭದಲ್ಲಿ ಅಹೋರಾತ್ರಿ ಶಹನಾಯಿ, ಸಂಗೀತ ಕಾರ್ಯಕ್ರಮ, ಮ್ಯಾಜಿಕ್ ಪ್ರದರ್ಶನ, ಹಾಗೂ ಹಾಸ್ಯ ಕಾರ್ಯಕ್ರಮಗಳ ಜಾಗರಣೆ ನಡೆಯಲಿದೆ. ಈ ಎಲ್ಲ ಕಾರ್ಯಕ್ರಮಕ್ಕೆ ಸದ್ಭಕ್ತರು ಆಗಮಿಸಿ ಶೋಭೆ ತರಬೇಕೆಂದು ಗುದ್ನೇಶ್ವರ ಮಠದ ಪ್ರಭುಲಿಂಗದೇವರು ವಿನಂತಿಸಿದ್ದಾರೆ.

ಫೆ.26ರಂದು ಸಂಜೆ 6.30ಕ್ಕೆ ಮಹಾಶಿವರಾತ್ರಿ ಜಾಗರಣೆ ಕಾರ್ಯಕ್ರಮ ನೆರವೇರಲಿದ್ದು, ಹೊಸಳ್ಳಿ ಬೂದೀಶ್ವರ ಮಠದ ಅಭಿನವ ಬೂದೀಶ್ವರ ಸ್ವಾಮಿಗಳು ಹಾಗೂ ಬೆಳ್ಳಟ್ಟಿ ರಾಮಲಿಂಗೇಶ್ವರ ಮಠದ ಬಸವರಾಜ ಸ್ವಾಮಿಜಿ ಸಾನ್ನಿಧ್ಯ ವಹಿಸುವರು. ಸೂರಜ ಅಳವಂಡಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅಥಿತಿಗಳಾಗಿ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಅಧ್ಯಕ್ಷರಾಗಿ ಅಗ್ನಿಶಾಮಕ ಮತ್ತು ತುರ್ತುಸ್ಥಿತಿ ವಿಭಾಗದ ಡಿಆಯ್‌ಜಿಪಿ ರವಿ ಚನ್ನಣ್ಣವರ, ಗಣ್ಯರಾದ ಗೌರಮ್ಮ ಬಡ್ನಿ, ಅಪ್ಪಣ್ಣ ಇನಾಮತಿ, ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಸಿದ್ದಲಿಂಗೇಶ್ವರ ಪಾಟೀಲ ಭಾಗವಹಿಸುವರು.

## ಮ್ಯಾಂಗೋ ಹೋಟೆಲ್ ಮೇಲೆ ಪೊಲೀಸರ ದಾಳಿ: 26 ಜನ ಅಂದರ್!



■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಅಂದರ್– ಬಾಹರ್ ಇಸ್ಪೀಟ್ ಜೂಜಾಟ ಆಡುತ್ತಿದ್ದ 26 ಜನರನ್ನು ಖಚಿತ ಮಾಹಿತಿ ಮೇರೆಗೆ ಪೊಲೀಸರು ಅರೆಸ್ಟ್ ಮಾಡಿರುವ ಘಟನೆ ದಾವಣಗೆರೆ ನಗರದ ಡೆಂಟಲ್ ಕಾಲೇಜು ರಸ್ತೆಯ ಮ್ಯಾಂಗೋ ಹೋಟೆಲ್ ನಲ್ಲಿ ಜರುಗಿದೆ.

ಹೋಟೆಲ್‌ನಲ್ಲಿ ಅಕ್ರಮವಾಗಿ ನಡೆಸಲಾಗುತ್ತಿದ್ದ ಅಂದರ್ ಬಾಹರ್ ಅಡ್ಡೆಯ ಮೇಲೆ ನಡೆದ ದಾಳಿಯಲ್ಲಿ 26 ಮಂದಿಯನ್ನು ವಶಕ್ಕೆ ಪಡೆದಿದ್ದು, ಅಡ್ಡೆಯಲ್ಲಿದ್ದ 24,86,500 ರೂ. ಹಣವನ್ನು ಜಪ್ತಿ ಮಾಡಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಎಸ್‌ಪಿ ಉಮಾ ಪ್ರಶಾಂತ್, ಹೆಚ್ಚುವರಿ ಎಸ್ಪಿ ವಿಜಯಕುಮಾರ್ ಎಂ ಸಂತೋಷ ಹಾಗೂ ಮಂಜುನಾಥ್ ಅವರ ಮಾರ್ಗದರ್ಶನದಲ್ಲಿ ಸಿಇಎನ್ ಅಪರಾಧ ಠಾಣೆಯ ಡಿವೈಎಸ್ಪಿ ಪದ್ಮಶ್ರೀ ಗುಂಜೀಕರ್ ನೇತೃತ್ವದಲ್ಲಿ ಪಿಎಸ್‌ಐ ಸುನೀಲ್ ತೇಲಿ ಹಾಗೂ ಸಿಬ್ಬಂದಿ ದಾಳಿ ಮಾಡಿದ್ದರು

ಆರೋಪಿತರ ವಿರುದ್ಧ ಸಿಇಎನ್ ಪೊಲೀಸ್ ಠಾಣೆಯಲ್ಲಿ ಕೆಪಿ ಆ್ಯಕ್ಟ್ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

### 200ನೇ ನಿರಂತರ ಉಚಿತ ನೇತ್ರ ಶಸ್ತ್ರಚಿಕಿತ್ಸಾ ಶಿಬಿರದಲ್ಲಿ ತೋಂಟದ ಶ್ರೀಗಳ ನುಡಿ

# ರೋಟರಿ ಕ್ಲಬ್‌ನಿಂದ ಸಮಾಜಮುಖಿ ಕಾರ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನ ಸರ್ವ ಇಂದ್ರಿಯಗಳಲ್ಲಿ ಕಣ್ಣು ಅತ್ಯಂತ ಮಹತ್ವದ ಅಂಗವಾಗಿದ್ದು, ಕಣ್ಣಿನ ಸಂರಕ್ಷಣೆ, ಕಾಳಜಿ ವಹಿಸಬೇಕೆಂದು ಗದಗ ತೋಂಟದಾರ್ಯ ಮಠದ ಜ. ಡಾ. ಸಿದ್ಧರಾಮ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಗದುಗಿನ ಶ್ರೀಮತಿ ಉಷಾದೇವಿ ಜಿ.ಕುಷ್ಟಗಿ ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ ರೋಟರಿ ಕ್ಲಬ್ ಗದಗ ಬೆಟಗೇರಿ ವೆಲ್ಫೇರ್ ಸೊಸೈಟಿ ಹಾಗೂ ಗದಗ–ಬೆಟಗೇರಿ ರೋಟರಿ ಕ್ಲಬ್ ನೀಲಮ್ಮ ಪ್ರಭಣ್ಣ ಹುಣಶಿಕಟ್ಟಿ ಅವರ ಪ್ರಾಯೋಜಕತ್ವದಲ್ಲಿ ಏರ್ಪಡಿಸಿದ್ದ 200ನೇ ಉಚಿತ ನೇತ್ರ ಶಸ್ತ್ರಚಿಕಿತ್ಸಾ ಶಿಬಿರದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ರೋಟರಿ ಕ್ಲಬ್ ಸಮಾಜಮುಖಿಯಾಗಿ, ಜನಮುಖಿಯಾಗಿ ಸೇವೆ ಮಾಡುವುದರಲ್ಲಿ ತನ್ನ ಹಿರಿಮೆಯನ್ನು ಮೆರೆದಿದೆ. ಜನತೆಯ ಆರೋಗ್ಯ ಸುಧಾರಣೆ ಹಾಗೂ ಸಮಾಜದ ಸ್ವಾಸ್ಥ್ಯ ಕಾಪಾಡುವಲ್ಲಿ ರೋಟರಿ ಪದಾಧಿಕಾರಿಗಳು ತಮ್ಮನ್ನು ಸೇವಾ ಕಾರ್ಯಕ್ಕೆ ಸಮರ್ಪಿಸಿಕೊಂಡಿರುವದು ಶ್ಲಾಘನೀಯ ಎಂದು ಬಣ್ಣಿಸಿದರು.

ಈ ಮೊದಲು ಗೋದಾನ, ಭೂದಾನ, ಅನ್ನದಾನ, ರಕ್ತದಾನ, ನೇತ್ರದಾನ ಇತ್ತಿಚೆಗೆ ದೇಹದಾನ ಹೀಗೆ ದಾನಗಳ ವಿಸ್ತಾರವು ಹೆಚ್ಚುತ್ತಿದ್ದು, ದಾನಗುಣಕ್ಕೆ ಹೊಸ ಪರಿಕಲ್ಪನೆಯ ಮೂಲಕ ಸಮಾಜಕ್ಕೆ ಒಳಿತಾಗುತ್ತ ಬಂದಿದೆ. ಆಧುನಿಕತೆಯ ಇಂದಿನ ದಿನಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಅಭಿವೃದ್ಧಿ ಹೊಂದಿದಂತೆ ವೈದ್ಯಕೀಯ ಕ್ಷೇತ್ರದಲ್ಲೂ ಹೊಸ ಹೊಸ ಆವಿಷ್ಕಾರಗಳು, ಅತ್ಯಾಧುನಿಕ ಯಂತ್ರೋಪಕರಣಗಳು ಜನರ ಆರೋಗ್ಯವನ್ನು ಸುಧಾರಿಸುವಲ್ಲಿ ಗಣನೀಯ ಪಾತ್ರ ವಹಿಸಿವೆ ಎಂದರು.

ರೋಟರಿಯ ಸಮಾಜಮುಖಿ, ಜನಮುಖಿ ಕಾರ್ಯಕ್ಕೆ ಜನಸಮುದಾಯವೂ ಕೈ ಜೋಡಿಸುತ್ತಿದೆ. ದಾನವು ಸದ್ವಿನಿಯೋಗ ಆಗುತ್ತಿರುವ ಹಿನ್ನೆಲೆಯಲ್ಲಿ ದಾನಿಗಳೂ ಸಹ ಮುಂದೆ ಬಂದು ದಾನ ನೀಡುವ ಮೂಲಕ ಸಂತೃಪ್ತ ಭಾವನೆ ಹೊಂದುತ್ತಿದ್ದಾರೆ ಎಂದರು.

ಉಚಿತ ನೇತ್ರ ಶಸ್ತ್ರಚಿಕಿತ್ಸಾ ಶಿಬಿರಗಳು ಯಶಸ್ವಿಯಾಗಿ ನಡೆದು ಬರಲು ಕಾರಣರಾದ ದಾನಿಗಳು, ವೈದ್ಯರು ಮತ್ತು ಸಿಬ್ಬಂದಿಯನ್ನು ಗೌರವಿಸಲಾಯಿತು.




ವೇದಿಕೆಯ ಮೇಲೆ ಶಿಬಿರದ ಪ್ರಾಯೋಜಕರಾದ ನೀಲಮ್ಮ ಪ್ರಭಣ್ಣ ಹುಣಶಿಕಟ್ಟಿ ದಂಪತಿಗಳು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಕುಂದ್ರಾಳಹಿರೇಮಠ ಪ್ರಾರ್ಥಿಸಿದರು, ರೋಟರಿ ಕ್ಲಬ್ ಅಧ್ಯಕ್ಷ ಡಾ. ಆರ್.ಬಿ. ಉಪ್ಪಿನ ಸ್ವಾಗತಿಸಿದರು. ಡಾ. ಉಮೇಶ ಪುರದ ಹಾಗೂ ವಿಶ್ವನಾಥ ಯಳಮಲಿ ಪರಿಚಯಿಸಿದರು. ಶ್ರೀಧರ ಸುಲ್ತಾನಪೂರ ನಿರಂತರ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರಗಳು ನಡೆದು ಬಂದ ದಾರಿ ಹಾಗೂ ರೋಟರಿ ಕ್ಲಬ್‌ನ ಅಸ್ತಿತ್ವದ ಕುರಿತು ಮಾತನಾಡಿದರು. ಬಾಲಕೃಷ್ಣ ಕಾಮತ್ ನಿರೂಪಿಸಿದರು, ಶಿವಾಚಾರ್ಯ ಹೊಸಳ್ಳಿಮಠ ವಂದಿಸಿದರು. ಕಾರ್ಯಕ್ರಮದಲ್ಲಿ ಡಾ.ವಿಜಯಕುಮಾರ ಸಜ್ಜನರ, ಡಾ. ಬಸರಿಗಿಡದ, ಡಾ. ವ್ಹಿ.ಬಿ. ಹಿರೇಮಠ, ಡಾ. ಮೇರವಾಡೆ, ಡಾ. ರಾಕೇಶ, ಡಾ. ಜಿ.ಬಿ. ಪಾಟೀಲ, ಡಾ. ಜ್ಯೋತಿ ಪಾಟೀಲ, ಕಾರ್ಯದರ್ಶಿ ಸಂತೋಷ ಅಕ್ಕಿ, ಡಾ. ಪ್ರದೀಪ ಉಗಲಾಟದ, ಶ್ರೀಧರ ಧರ್ಮಾಯತ, ಸಂಜಯ ಬಾಗಮಾರ, ಅರವಿಂದಸಿಂಗ್ ಬ್ಯಾಳಿ, ಚನ್ನವೀರಪ್ಪ ಹುಣಶಿಕಟ್ಟಿ, ನರೇಶ್ ಜೈನ್, ಎಚ್. ಎಸ್. ಪಾಟೀಲ, ಚೇಂಬರ್ ಅಧ್ಯಕ್ಷ ತಾತನಗೌಡ ಪಾಟೀಲ, ನಾಗರತ್ನಾ ಮಾರನಬಸರಿ, ಪ್ರೀತಿ ಶಿವಪ್ಪಯ್ಯನಮಠ, ರಾಣಿ ಚಂದಾವರಿ ಸೇರಿದಂತೆ ರೋಟರಿ, ಇನ್ನರ್‌ವ್ಹೀಲ್ ಕ್ಲಬ್‌ನ ಸದಸ್ಯರು, ನೇತ್ರಚಿಕಿತ್ಸಾ ಫಲಾನುಭವಿಗಳು ಪಾಲ್ಗೊಂಡಿದ್ದರು.

ಅಧ್ಯಕ್ಷತೆ ವಹಿಸಿದ್ದ ಡಾ. ಶೇಖರ ಸಜ್ಜನರ ಮಾತನಾಡಿ, ಜನಸೇವೆಗಾಗಿ ತನ್ನನ್ನು ಸಮರ್ಪಿಸಿಕೊಂಡಿರುವ ರೋಟರಿ ಕ್ಲಬ್ ಗದಗ–ಬೆಟಗೇರಿ ವೆಲ್ಫೇರ್ ಸೊಸೈಟಿ ಹಾಗೂ ಗದಗ–ಬೆಟಗೇರಿ ರೋಟರಿ ಕ್ಲಬ್ ತನ್ನ ಹಲವಾರು ಸಮಾಜಮುಖಿ ಕಾರ್ಯಗಳಿಂದಾಗಿ ಜನಮನ್ನಣೆ ಪಡೆದುಕೊಂಡಿದೆ. ಈ ಎಲ್ಲ ಕಾರ್ಯಗಳಿಗೆ ಪ್ರಾಯೋಜಕರ ಪಾತ್ರವೂ ಅಷ್ಟೇ ಮಹತ್ವದ್ದಾಗಿದೆ ಎಂದರಲ್ಲದೆ, ಉಚಿತ ನೇತ್ರ ಶಸ್ತ್ರಚಿಕಿತ್ಸಾ ಶಿಬಿರಗಳು ನಿರಂತರವಾಗಿ ಮುಂದುವರೆಯಲಿವೆ ಎಂದರು.

# ಸಮುದಾಯ ಭವನಕ್ಕೆ ನಿವೇಶನ ಒದಗಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ



ಮಾದಿಗ ಸಮುದಾಯ ಭವನ ನಿರ್ಮಾಣಕ್ಕೆ ನಿವೇಶನ ಮಂಜೂರು ಮಾಡುವಂತೆ ಶ್ರೀ ನಿತ್ಯಾನಂದ ಸೇವಾ ಟ್ರಸ್ಟ್ ಗದಗ ವತಿಯಿಂದ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿಯವರಿಗೆ ಮನವಿ ಸಲ್ಲಿಸಿದರು. ಗೌರವಾಧ್ಯಕ್ಷ ವೀರಪ್ಪ ಕೋಟ್ನಿಕಲ್ ಮತ್ತು ಅಧ್ಯಕ್ಷ ವಿರೂಪಾಕ್ಷ ಪರಾಪೂರ, ವಿಜಯ ಕಲ್ಮನಿ ಮನವಿ ಸಲ್ಲಿಸಿ ಮಾತನಾಡಿ, ಮಾದಿಗ ಸಮುದಾಯಕ್ಕೆ ಮಂಗಲ ಕಾರ್ಯಕ್ರಮಗಳು ಹಾಗೂ ಸಮಾಜದ ಸಭೆ–ಸಮಾರಂ ಭಗಳನ್ನು ನೆರವೇರಿಸಲು ಸಮುದಾಯ ಭವನದ ಅವಶ್ಯಕತೆಯಿದ್ದು, ಸದರ ಸಮುದಾಯ ಭವನ ನಿರ್ಮಾಣ ಮಾಡಲು ಅವಳಿ ನಗರದ ಡಿ.ಸಿ. ಮಿಲ್ ಕಂಪೌಂಡ್‌ನಲ್ಲಿರುವ ಸಿ.ಟಿ.ಎಸ್. 3982ರಲ್ಲಿಯ ವಿನಾಯಕ ಬಡಾವಣೆಯಲ್ಲಿ ಸಾರ್ವಜನಿಕ ಸೌಕರ್ಯಕ್ಕಾಗಿ ಮೀಸಲಿಟ್ಟ ಖುಲ್ಲಾ ಜಾಗೆಯನ್ನು ಅಥವಾ ಸರ್ಕಾರದಿಂದ ಗದಗ ಹೃದಯ ಭಾಗದಲ್ಲಿ ನಿವೇಶನ ಮಂಜೂರು ಮಾಡಿಸಿ ಕೊಡಬೇಕೆಂದು ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ಟ್ರಸ್ಟನ್ ಕಾರ್ಯದರ್ಶಿಗಳಾದ ಪುಂಡಲೀಕ ಕಲ್ಮನಿ, ಅಶೋಕ ಹಾದಿಮನಿ, ಮಂಜುನಾಥ ಕೋಟ್ನಿಕಲ್, ಅಶೋಕ ಕುಡತಿನ್ನಿ ಸೇರಿದಂತೆ ಮಾದಿಗ ಸಮುದಾಯದ ಗುರುಹಿರಿಯರು, ಯುವಕರು ಉಪಸ್ಥಿತರಿದ್ದರು.

# ಪಿಎಸ್‌ಎಸ್ ಶಾಲೆಯ ವಾರ್ಷಿಕೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಡಾ. ಕೆ.ಬಿ. ಧನ್ನೂರ ಪಿಎಸ್‌ಎಸ್ ಪೂರ್ವ ಪ್ರಾಥಮಿಕ, ಪ್ರಾಥಮಿಕ ಹಾಗೂ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಗಳ ವಾರ್ಷಿಕೋತ್ಸವವು ಫೆ. 23ರಂದು ಮಧ್ಯಾಹ್ನ 2ಕ್ಕೆ ಜರುಗಲಿದೆ.

ಈ ಸಂದರ್ಭದಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ, ಸರ್. ಸಿ.ವಿ. ರಾಮನ್ ವಿಜ್ಞಾನ ವಸ್ತು ಪ್ರದರ್ಶನ, ವೈ.ಜಿ. ಅಮರಗೋಳಕರ ಸಂಗೀತ ಪಾಠಶಾಲೆಯ ಪ್ರಾರಂಭೋತ್ಸವ ಹಾಗೂ ಬಸಲಿಂಗಪ್ಪ ಧನ್ನೂರ ಸಭಾ ಭವನದ ಉದ್ಘಾಟನಾ ಕಾರ್ಯಕ್ರಮಗಳು ಜರುಗಲಿವೆ.

ವಿಜ್ಞಾನ ವಸ್ತು ಪ್ರದರ್ಶನವನ್ನು ಧುರೀಣ ಮಿಥುನ್ ಪಾಟೀಲ ನೆರವೇರಿಸಲಿದ್ದಾರೆ.

ಸಂಗೀತ ಪಾಠಶಾಲೆಯ ಉದ್ಘಾಟನೆಯನ್ನು ಕರ್ನಾಟಕ ಪ್ರದೇಶ ಯೂಥ್ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲ ನೆರವೇರಿಸಲಿದ್ದು, ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ, ನಿ. ಮುಖ್ಯೋಪಾಧ್ಯಾಯ ಸಿ.ವಿ. ವಂಕಲಕುಂಟಿ, ಡಯಟ್ ಉಪನ್ಯಾಸಕ ಕೆ.ಪಿ. ಸಾಲಿಮಠ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಹಾಗೂ ಡಾ. ಆರ್.ಕೆ. ಗಚ್ಚಿನಮಠ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಅಧ್ಯಕ್ಷತೆಯನ್ನು ಡಾ. ಕೆ.ಬಿ. ಧನ್ನೂರ ವಹಿಸಲಿದ್ದಾರೆ.

ಸಂಜೆ 4ಕ್ಕೆ ನಡೆಯುವ ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ರೋಣ ಗುಲಗಂಜಿ ಮಠದ ಶ್ರೀ ಗುರುಪಾದ ದೇವರು ವಹಿಸಲಿದ್ದಾರೆ. ಶಾಸಕ ಜಿ.ಎಸ್. ಪಾಟೀಲ ಉದ್ಘಾಟನೆ ನೆರವೇರಿಸಲಿದ್ದು, ನಿವೃತ್ತ ಪ್ರಾಚಾರ್ಯ ಬಿ.ಎಫ್. ಚೇಗರೆಡ್ಡಿ, ನಿವೃತ್ತ ಪ್ರಾಧ್ಯಾಪಕ ಎಸ್.ವಿ. ಪತ್ರಿಮಠ, ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ಗದಗ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿ.ಆರ್. ಗುಡಿಸಾಗರ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್. ಎನ್. ಹುರಳಿ, ಸಿಆರ್‌ಪಿ ಜ್ಯೋತಿ ಬೇಲೇರಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಅಧ್ಯಕ್ಷತೆಯನ್ನು ಡಾ. ಕೆ.ಬಿ. ಧನ್ನೂರ ವಹಿಸಲಿದ್ದಾರೆ ಎಂದು ಶಾಲಾ ಪ್ರಕಟಣೆ ತಿಳಿಸಿದೆ.

# ಕಲಿಕಾ ಹಬ್ಬದಿಂದ ಶೈಕ್ಷಣಿಕ ಪ್ರಗತಿ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಎಫ್‌ಎಲ್‌ಎನ್ ಕಲಿಕಾ ಹಬ್ಬವು ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿವೆ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ (ಡಿಪಿಇಪಿ) ಶಾಲೆಯಲ್ಲಿ ಮುಳಗುಂದ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬದಲ್ಲಿ ಪ್ರಶಸ್ತಿ ವಿತರಿಸಿ ಮಾತನಾಡಿ, ಮಕ್ಕಳು ಸ್ಪರ್ಧಾತ್ಮಕವಾಗಿ ಕಲಿಕೆಯಲ್ಲಿ ಸಂತೋಷದಿಂದ ತೊಡಗಿಕೊಳ್ಳಲು ಕಲಿಕಾ ಹಬ್ಬವು ಸಹಕಾರಿಯಾಗಿದೆ.ಮಕ್ಕಳು ಇಂತಹ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ತಮ್ಮ ಕಲೆಗಳನ್ನು ಪ್ರದರ್ಶಿಸಲು ನೆರವಾಗುತ್ತದೆ ಎಂದರು.

ಪ.ಪಂ ಅಧ್ಯಕ್ಷೆ ಯಲವ್ವ ಕವಲೂರ, ಅಶೋಕ ಹುಣಶಿಮರದ, ಶಾಲಾ ಪ್ರಧಾನ ಗುರು ಯು.ಐ. ಭಜಂತ್ರಿ, ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕೆಂಚನಾಯ್ಕರ್, ಸಿಆರ್‌ಪಿ ಎಂ.ಎಂ. ನಿಂಬನಾಯ್ಕರ್, ಪಿ.ಸಿ. ಪಾಟೀಲ್, ಬಳಗಾನೂರ, ಬಾಳಿಹಳ್ಳಿಮಠ, ವಿ.ವಿ. ಕರಿಗಾರ, ಬಸವರಾಜ ಹೊಂಬಳ, ಆರೀಫ್ ಶಿರಹಟ್ಟಿ, ಶೈಲಾ ಬಿನ್ನಾಳ, ಬೀಬಿಜಾನ ಖಾಲೇಖಾನವರ, ಅನುಷಾ ಹಸಬಿ ಸೇರಿದಂತೆ ಎಸ್‌ಡಿಎಂಸಿ ಸದಸ್ಯರು ಇದ್ದರು.


**ಕರ್ನಾಟಕ ಸರ್ಕಾರ**

**ಕಂದಾಯ ಇಲಾಖೆ**

**ಭೂಸ್ವಾಧೀನ ಕಾಯ್ದೆಯ ಕಲಂ19 (1) ರೊಂದಿಗೆ ಓದಲಾದ ಪ್ರಕರಣ19 (2)ರ ಅನ್ವಯ ಘೋಷಣೆ**

**ಸಂ:ಕಂಇ 20 ಎಕ್ಯೂಡಿ 2023** **ದಿನಾಂಕ: 15–02–2025**

ಗದಗ ಜಿಲ್ಲೆ ಗದಗ ಗ್ರಾಮದ ಸರ್ವೆ ನಂ. 260 ರಲ್ಲಿರುವ ಗದಗ ಮೃಗಾಲಯವನ್ನು ವಿಸ್ತರಿಸಿ ಅಭಿವೃದ್ಧಿಪಡಿಸಲು ಅಗತ್ಯವಿರುವ ಗದಗ ಜಿಲ್ಲೆ ಗದಗ ತಾಲೂಕಿನ ಗದಗ ಗ್ರಾಮದ ಗದಗ ಗ್ರಾಮದ ಸರ್ವೇ ನಂ. 266 ಮತ್ತು 267ರ ಜಮೀನನ್ನು ಈ ಕೆಳಗಿನ ಅನುಸೂಚಿಯಲ್ಲಿ ಕಾಣಿಸಿರುವ ಜಮೀನುಗಳ ಸ್ವಾಧೀನತೆಯ ಅವಶ್ಯಕತೆ ಕಂಡುಬಂದಿದ್ದರಿಂದ ಹಾಗೂ ಈ ಯೋಜನೆಗೆ ಭೂಸ್ವಾಧೀನತೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಹಾಗೂ ಪುನರ್ ನಿರ್ಮಾಣ ಕಾಯ್ದೆ–2013 (2013 ಕೇಂದ್ರ ಅಧಿನಿಯಮ ಸಂಖ್ಯೆ:30) ಕ್ಕೆ ಅನುಗುಣವಾಗಿ ಕರ್ನಾಟಕ ರಾಜ್ಯಕ್ಕೆ ಅನ್ವಯಸುವಂತೆ ದಿನಾಂಕ: 23–07–2019 ರಿಂದ ಜಾರಿಗೆ ಬಂದಿರುವ ಭೂಸ್ವಾಧೀನತೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಹಾಗೂ ಪುನರ್ ನಿರ್ಮಾಣ (ಕರ್ನಾಟಕ ತಿದ್ದುಪಡಿ) ಕಾಯ್ದೆ–2020 (2020 ರ ಕರ್ನಾಟಕ ಅಧಿನಿಯಮ ಸಂಖ್ಯೆ:16) ರ ಕಲಂ (ಎ) ರಡಿ ಮೂಲಕಾಯ್ದೆಯ ಅಧ್ಯಾಯ-II & III ರಲ್ಲಿನ ಉಪಬಂಧಗಳನ್ನು ಅನ್ವಯಿಸುವುದರಿಂದ ವಿನಾಯಿತಿ ನೀಡಿ, ಸಂಖ್ಯೆ: ಕಂಇ 20 ಎಕ್ಯೂಡಿ 2023, ದಿನಾಂಕ: 18–11–2023 ರ ಸರ್ಕಾರದ ಅಧಿಸೂಚನೆಯನ್ನು ಹೊರಡಿಸಿದ್ದರ ಮೇರೆಗೆ 2013 ರ ಮೂಲ ಕಾಯ್ದೆಯ ಕಲಂ 11(1) ರಡಿ ಕ್ರಮಾಂಕ:ಎಲ್‌ಎಕ್ಯೂ/ಸಿಆರ್/26/2023–24 **ದಿನಾಂಕ: 18–11–2023** ರಲ್ಲಿ ಅಧಿಸೂಚನೆ **ದಿನಾಂಕ: 18–11–2023** ರಂದು ರಾಜ್ಯ ಪತ್ರ ದಲ್ಲಿ ಪ್ರಕಟಿಸಿದಂತೆ ಕಲಂ 15(1) ರನ್ವಯ ಸ್ವೀಕೃತವಾಗಿರುವ ಆಕ್ಷೇಪಣೆಗಳನ್ನು ಆಲಿಸಿದ ನಂತರ ಹಾಗೂ ಸೂಕ್ತ ವಿಚಾರಣಾ ವರದಿಯನ್ನು ನಡೆಸಿದ ನಂತರ ವಿಚಾರಣಾ ವರದಿಯನ್ನು ಸರ್ಕಾರದ ಪತ್ರ ಸಂಖ್ಯೆ: ಕಂಇ 20 ಎಕ್ಯೂಡಿ 2023 **ದಿನಾಂಕ: 06–01–2025ರಲ್ಲಿ** ಒಪ್ಪಿ ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರೆಸಲು ನಿರ್ದೇಶನ ನೀಡಲಾಗಿದೆ.

ಭೂಸ್ವಾಧೀನತೆ ಪ್ರಕ್ರಿಯೇಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಹಾಗೂ ಪುನರ್ ನಿರ್ಮಾಣ ಕಾಯ್ದೆ–2013ರ ಕಲಂ 19(1) ರಡಿ ಕೆಳಗೆ ಸೂಚಿಸಿರುವ ಜಮೀನುಗಳನ್ನು ಸ್ವಾಧೀನಪಡಿಸಿಕೊಳವುದು ಅಗತ್ಯವಿದೆ ಎಂದು ಕರ್ನಾಟಕ ಸರ್ಕಾರಕ್ಕೆ ಮನದಟ್ಟಾಗಿರುವದರಿಂದ, ಮೇಲೆ ತಿಳಿಸಿದ ಉದ್ದೇಶಕ್ಕಾಗಿ ಜಮೀನುಗಳು ಅಗತ್ಯವಾಗಿದೆ ಎಂದು ಸದರಿ ಅಧಿನಿಯಮ 19(1) ನೇ ಪ್ರಕರಣದ ಮೇರೆಗೆ ಈ ಮೂಲಕ ಘೋಷಿಸಲಾಗಿದೆ.

ಅದರಂತೆ ಸದರಿ ಭೂಸ್ವಾಧೀನ ನಿಯಮ 3ನೇ ಪ್ರಕರಣದ (ಜಿ) ಖಂಡದ ಮೇರೆಗೆ ಉಪ–ವಿಭಾಗಾಧಿಕಾರಿಗಳು ಗದಗ ಉಪ–ವಿಭಾಗ, ಗದಗ ಇವರನ್ನು ಸದರಿ ಜಮೀನುಗಳ ಸ್ವಾಧೀನತೆಯ ಮುಂದಿನ ಎಲ್ಲಾ ಕಾನೂನು ಕ್ರಮ ಮತ್ತು ಪ್ರಕ್ರಿಯೆಗಳ ಕುರಿತಂತೆ ಜಿಲ್ಲಾಧಿಕಾರಿಯವರ ಪ್ರಕಾರ್ಯವನ್ನು ನಿರ್ವಹಿಸುವಸಲುವಾಗಿ ಈ ಮೂಲಕ ನೇಮಕ ಮಾಡಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ20ಎಕ್ಯೂಬಿ2023 ದಿನಾಂಕ:18–11–2023ರನ್ವಯ ಸದರಿ ಯೋಜನೆಗೆ 2013 ರ ಮೂಲ ಕಾಯ್ದೆಯ ಅಧ್ಯಾಯ-II&III ರಲ್ಲಿನ ಉಪಬಂಧಗಳನ್ನು ಅನ್ವಯಿಸುವುದರಿಂದ ವಿನಾಯಿತಿ ನೀಡಲಾಗಿರುವುದರಿಂದ 2013 ರ ಮೂಲಕ ಕಾಯ್ದೆಯ ಅಧ್ಯಾಯ-II

& III ರಲ್ಲಿನಪುನರ್ ವಸತಿ ಮತ್ತು ಪುನರ್ನಿರ್ಮಾಣದ ಅವಕಾಶಗಳ ಬದಲಾಗಿ ನೀಡಲಾಗುವ ಒಂದು ಇಡಿಗಂಟು ಮೊತ್ತವನ್ನು ಭೂಸ್ವಾಧೀನತೆ ಪ್ರಕ್ರಿಯೇಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಹಾಗೂ ಪುನರ್ ನಿರ್ಮಾಣ (ಕರ್ನಾಟಕ ತಿದ್ದುಪಡಿ) ನಿಯಮಗಳು–2020 ರ ನಿಯಮ 29(5) ನಿಗಧಿಪಡಿಸಲು ತೀರ್ಮಾನಿಸಲಾಗಿದೆ.

ಈ ಮೇಲಿನ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ ಸದರಿ ಅಧಿನಿಯಮದ ಕಲಂ –21(1) ರಡಿ ಸಂಬಂಧಿಸಿದ ಹಿತಾಸಕ್ತಿದಾರರಿಗೆ ಭೂಸ್ವಾಧೀನತೆಯ ಜಮೀನುಗಳ ಕಬ್ಜಾ ಪಡೆಯುವ ಉದ್ದೇಶದ ಬಗ್ಗೆ ಹಾಗೂ ಪರಿಹಾರದ ಕ್ಲೇಮುಗಳನ್ನು ಸಲ್ಲಿಸಲು ತಿಳುವಳಿಕೆಯ ನೋಟಿಸನಡಿ ಮುಂದಿನ ಕ್ರಮಜರುಗಿಸಲು ನಿರ್ದೇಶಿಸಿದೆ.

ಸದರಿ ಅಧಿಸೂಚನೆಯಲ್ಲಿ ಒಳಪಡುವ ಜಮೀನುಗಳ ವಿವರವನ್ನು ಸೂಚಿಸುವ ಒಂದು ನಕಾಶೆಯನ್ನು ಸಾರ್ವಜನಿಕ ಹಿತಾಸಕ್ತಿದಾರರ ಅವಗಾಹನೆಗಾಗಿ ಭೂಸ್ವಾಧೀನಾಧಿಕಾರಿ ಹಾಗೂ ಉಪ ವಿಭಾಗಾಧಿಕಾರಿ ಗದಗ ಇವರ ಕಾರ್ಯಾಲಯದಲ್ಲಿ ಪರಿಶೀಲನೆಗೆ ಇಡಲಾಗಿದೆ.

**ಅನುಸೂಚಿ**

**(ಕ್ರ.ಎಲ್‌ಎಕ್ಯೂ/ಸಿ.ಆರ್/08/2023–24)**

ಜಿಲ್ಲೆ: ಗದಗ ತಾಲೂಕು: ಗದಗ ಹೋಬಳಿ: ಗದಗ ಗ್ರಾಮ: ಗದಗ

| ಅ ನಂ | ಖಾತೆದಾರರ / ಅನುಭವದಾರರ ಹೆಸರು (ಜೆ.ಎಂ.ಸಿ ರನ್ವಯ) | ಸರ್ವೆ/ ಖಾತಾ ನಂಬರ್ | ಹಿಸ್ಸಾ ನಂ. | ಸ್ವಾಧೀನಕ್ಕೊಳಪಡುವ ಒಟ್ಟು ಕ್ಷೇತ್ರ (ಕಲಂ–11(1) ರನ್ವಯ) | | ತರಹೆ | ಸ್ವಾಧೀನಕ್ಕೊಳಪಡುವ ಒಟ್ಟು ಕ್ಷೇತ್ರ | | ತರಹೆ | ಸರಹದ್ದು | | | | ಮರ (ಮಾಲ್ಕಿ)ಗಳ ವಿವರ | ಷರಾ |
|---|---|---|---|---|---|---|---|---|---|---|---|---|---|---|---|
| | | | | ಕೃಷಿ | ಖರಾಬು | | ಕೃಷಿ | ಖರಾಬು | | ಪೂರ್ವ | ಪಶ್ಚಿಮ | ಉತ್ತರ | ದಕ್ಷಿಣ | | |
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 | 15 | 16 |
| 1 | 1) ಬೂದಿಹಾಳ ಶಿವಬಸಪ್ಪ ತಂ.ಶಿವಲಿಂಗಪ್ಪ 2) ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರಾ.ಹೆ. ಸಂ. 63. 3) ಮಲಪ್ರಭಾ ಬಲದಂಡೆ ಕಾಲುವೆ ಭೂಸ್ವಾಧೀನ | 266 | 4 | 0ಎ–05ಗುಂ | – | ಖುಷ್ಕಿ | 00ಎ–05ಗುಂ | – | ಖುಷ್ಕಿ | ನಾಲಾ | ಹಳ್ಳವು | ರಿ.ಸ.ನಂ. 266/3 | ರಿ.ಸ.ನಂ. 266/5 | – | – |
| 2 | 1) ಬೂದಿಹಾಳ ಶಿವಬಸಪ್ಪ ತಂ.ಶಿವಲಿಂಗಪ್ಪ 2) ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರಾ.ಹೆ. ಸಂ. 63. 3) ಮಲಪ್ರಭಾ ಬಲದಂಡೆ ಕಾಲುವೆ ಭೂಸ್ವಾಧೀನ | 266 | 5 | 1ಎ–18ಗುಂ | – | ಖುಷ್ಕಿ | 00ಎ–35ಗುಂ | – | ಖುಷ್ಕಿ | ರಸ್ತೆ (ರಾ.ಹ) | ಹಳ್ಳವು | ರಿ.ಸ.ನಂ. 266/4 | ರಿ.ಸ.ನಂ. 267 | ಹುಣಸೆ ಮರಗಳು | – |
| 3 | 1) ಕಾರದಕಟ್ಟಿ ರಾಜಶೇಖರ ತಂ. ಚನ್ನವೀರಪ್ಪ 2) ಕಾರದಕಟ್ಟಿ ರಾಜಕುಮಾರ ತಂ. ಚನ್ನವೀರಪ್ಪ 3) ಕಾಳೆ ನೀಲವ್ವ ಕೋಂ.ಮಲ್ಲಪ್ಪ 4) ಖಮಿತ್ಕರ ಗಂಗವ್ವ ಕೋಂ. ರಾಮಚಂದ್ರಪ್ಪ 5) ಕಾರದಕಟ್ಟಿ ಮಧುಮತಿ ತಂ. ಚನ್ನವೀರಪ್ಪ | 267 | 1 | 2ಎ–12ಗುಂ | – | ಖುಷ್ಕಿ | 2ಎ–12ಗುಂ | – | ಖುಷ್ಕಿ | ರಿ.ಸ.ನಂ 267/3 | ಹಳ್ಳವು | ರಿ.ಸ.ನಂ. 266 | ರಿ.ಸ.ನಂ. 267/2 | – | – |
| 4 | ಕಾರದಕಟ್ಟಿ ಶಂಭುಲಿಂಗಪ್ಪ ವೀರಪ್ಪ | 267 | 2 | 4ಎ–04ಗುಂ | – | ಖುಷ್ಕಿ | 4ಎ–04ಗುಂ | – | ಖುಷ್ಕಿ | ರಿ.ಸ.ನಂ 267/ 3267/ 4267/5 | ಹಳ್ಳವು | ರಿ.ಸ.ನಂ. 267/1 | ರಿ.ಸ.ನಂ. 270 | 1–ತೇರದ ಬಾವಿ, 1–ಮಾವಿನ ಮರ, 1–ಹುಣಸೆಮರ, 4–ತೆಂಗಿನಮರ, 2–ತೇಗಿನ ಮರ, 3–ಬೇವಿನಮರ, 2–ಬನ್ನಿಮರ 1–ಅರಳಿಮರ, ಸೋಗಿನ ಮರ, 2–ಬಾರಿಗಿಡ | – |
| 5 | 1) ಅಮೃತ ತಂ.ಶಂಕರಸಾ ಪಟ್ಟಣ 2) ಬಾಕಳೆ ಗಜಾನನ ಅರವಿಂದ 3) ಹಬೀಬ ದೇವೇಂದ್ರಸಾ ಪರಶುರಾಮಸಾ | 267 | 3 | 0ಎ–33ಗುಂ | – | ಖುಷ್ಕಿ | 0ಎ–33ಗುಂ | – | ಖುಷ್ಕಿ | ರಸ್ತೆ (ರಾ.ಹೆ) | ರಿ.ಸ.ನಂ. 267/1, 267/2 | ರಿ.ಸ.ನಂ. 266 | ರಿ.ಸ.ನಂ. 267/4 | 10–ತೆಂಗಿನ ಮರ | – |
| 6 | 1) ಗಣೇಶ ವಿಶ್ವನಾಥಸಾ ಶಿದ್ಲಿಂಗ 2 ವಂದನಾ ಕೋಂ. ಗಣೇಶ ಶಿದ್ಲಿಂಗ 3) ಶ್ರೀಕಾಂತ ನಾರಾಯಣಸಾ ಲದವಾ 4) ವೈಶಾಲಿ ಕೋಂ. ಶ್ರೀಕಾಂತ ಲದವಾ | 267 | 4 | 2ಎ–03ಗುಂ | – | ಖುಷ್ಕಿ | 2ಎ–03ಗುಂ | – | ಖುಷ್ಕಿ | ರಸ್ತೆ (ರಾ.ಹೆ) | ರಿ.ಸ.ನಂ. 267/2 | ರಿ.ಸ.ನಂ. 267/3 | ರಿ.ಸ.ನಂ. 267/5 | 5–ತೆಂಗಿನ ಮರ | – |
| 7 | 1) ಪರಶುರಾಮ ತಂ.ಶಂಕರಸಾ ಖಟವಟೆ 2) ವಿನಾಯಕ ತಂ.ಅರುಣ ಖಟವಟೆ 3) ಸಾಗರ ತಂ.ಡೊಂಗರಸಾ ಪವಾರ 4) ಆನಂದ ತಂ.ಬಾಬಾಸಾ ಭಾಂಡಗೆ | 267 | 5 | 2ಎ–25ಗುಂ | – | ಖುಷ್ಕಿ | 2ಎ–25ಗುಂ | – | ಖುಷ್ಕಿ | ರಸ್ತೆ (ರಾ.ಹೆ) | ರಿ.ಸ.ನಂ. 267/2 | ರಿ.ಸ.ನಂ. 267/4 | ರಿ.ಸ.ನಂ. 270 271 | – | – |
| | **ಒಟ್ಟು** | | | **12ಎ–37ಗುಂ** | | | **12ಎ–37ಗುಂ** | – | | | | | | | |

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ**

**(ರೇಣುಕ. ಬಿ)**

**ಸರ್ಕಾರದ ಅದೀನ ಕಾರ್ಯದರ್ಶಿ**

**ಕಂದಾಯ ಇಲಾಖೆ (ಭೂಸ್ವಾಧೀನ–1&3).**

**ವಾ.ಸಾ.ಇ/ಗದಗ/638/ದೇಶಪಾಂಡೆಪಬ್ಲಿಸಿಟಿ/2024–25**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka